ಸಂಪುಟ : 11 ಸಂಚಿಕೆ: 24 ಪುಟ : 4+2 ಬೆಲೆ: 3.00 ಶನಿವಾರ ಫೆಬ್ರವರಿ 21 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 24 Pages : 4+2 Price : 3.00 Saturday February 21 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ 2026ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಫೆಬ್ರವರಿ 28ರಿಂದ ಮಾರ್ಚ್ 17ರವರೆಗೆ ನಡೆಯಲಿವೆ. ಪ್ರತಿದಿನ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪರೀಕ್ಷೆ ನಡೆಯಲಿದೆ.

ಪರೀಕ್ಷಾ ಸಮಯದಲ್ಲಿ ನಕಲು, ಪರೀಕ್ಷಾರ್ಥಿಗಳ ಬದಲು ಇತರರು ಪರೀಕ್ಷೆಗೆ ಹಾಜರಾಗುವಂತಹ ಅವ್ಯವಹಾರಗಳನ್ನು ತಡೆಗಟ್ಟುವ ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ–ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಗದಗ ಜಿಲ್ಲೆಯ 24 ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ.

ಫೆಬ್ರವರಿ 28ರಿಂದ ಮಾರ್ಚ್ 17ರವರೆಗೆ ಪ್ರತಿದಿನ ಬೆಳಿಗ್ಗೆ 8ರಿಂದ ಮಧ್ಯಾಹ್ನ 3ರವರೆಗೆ ಈ ಪ್ರತಿಬಂಧಕಾಜ್ಞೆ ಜಾರಿಯಲ್ಲಿರುತ್ತದೆ. ಪರೀಕ್ಷಾರ್ಥಿಗಳು, ಪರೀಕ್ಷಾ ಕಾರ್ಯನಿರ್ವಹಣೆಯಲ್ಲಿ ತೊಡಗಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ಹೊರತುಪಡಿಸಿ ಇತರ ಯಾವುದೇ ವ್ಯಕ್ತಿಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ. ಐದು ಜನಕ್ಕಿಂತ ಹೆಚ್ಚು ಮಂದಿ ಗುಂಪು ಸೇರುವುದು ಕೂಡ ನಿಷೇಧಿಸಲಾಗಿದೆ.

ನಿಷೇಧಿತ ಪ್ರದೇಶದ ವ್ಯಾಪ್ತಿಯಲ್ಲಿ ಇರುವ ಝೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್ ಹಾಗೂ ಫೋಟೋ ಕಾಪಿಯರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಬಂದ್ ಮಾಡಲು ಆದೇಶಿಸಲಾಗಿದೆ. ಇದೇ ವೇಳೆ ಪರೀಕ್ಷೆ ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನೂ ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ.

ಮಾಧ್ಯಮ ಪ್ರತಿನಿಧಿಗಳಿಗೆ ಪರೀಕ್ಷಾ ದಿನಗಳಲ್ಲಿ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ಆಗಮಿಸುವ ಮತ್ತು ಹೊರಹೋಗುವ ಸಂದರ್ಭಗಳಲ್ಲಿ ಮಾತ್ರ ಚಿತ್ರೀಕರಣಕ್ಕೆ ಅವಕಾಶವಿದ್ದು, ಪರೀಕ್ಷಾ ಕೊಠಡಿಗಳೊಳಗೆ ಪ್ರವೇಶ ಹಾಗೂ ಚಿತ್ರೀಕರಣ ಸಂಪೂರ್ಣ ನಿಷೇಧಿಸಲಾಗಿದೆ.

ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಗೆ ಕ್ಯಾಮೆರಾ ಇಲ್ಲದ ಸಾಮಾನ್ಯ ಮೊಬೈಲ್ ಫೋನ್ ಇಟ್ಟುಕೊಳ್ಳಲು ಮಾತ್ರ ಅವಕಾಶವಿದೆ. ಇತರೆ ಎಲ್ಲಾ ಪರೀಕ್ಷಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಮೊಬೈಲ್ ಫೋನ್ ಸೇರಿದಂತೆ ಯಾವುದೇ ಸಂಪರ್ಕ ಸಾಧನಗಳನ್ನು ತರಲು ಹಾಗೂ ಬಳಕೆ ಮಾಡಲು ನಿರ್ಬಂಧಿಸಲಾಗಿದೆ.

ಪರೀಕ್ಷಾ ಮಂಡಳಿಯು ನಿಷೇಧಿಸಿದ ಯಾವುದೇ ವಸ್ತುಗಳನ್ನು ಪರೀಕ್ಷಾ ಕೇಂದ್ರದೊಳಗೆ ತೆಗೆದು–ಕೊಂಡು ಹೋಗಲು ಅವಕಾಶವಿಲ್ಲ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ. 27 ರಂದು ಜಿಲ್ಲಾ ಮಟ್ಟದ ಜನತಾ ದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆ ವ್ಯಾಪ್ತಿಯ ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ದಿನಾಂಕ 27–02–2026 ರಂದು ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರ ಸಮಸ್ಯೆಗಳು ಹಾಗೂ ಮನವಿಗಳನ್ನು ನೇರವಾಗಿ ಆಲಿಸಿ ತ್ವರಿತ ಪರಿಹಾರ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ದಿನಾಂಕ 17–02–2026 ರಿಂದ 21–02–2026 ರವರೆಗೆ ಗದಗ–ಬೆಟಗೇರಿ ನಗರಸಭೆ ಕಚೇರಿಯಲ್ಲಿ ವಿಶೇಷ ಕೌಂಟರ್ ತೆರೆಯಲಾಗಿದ್ದು, ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ.

ಅವಳಿ ನಗರದ ಸಾರ್ವಜನಿಕರು ತಮ್ಮ ಸಮಸ್ಯೆಗಳು, ಮನವಿಗಳು ಹಾಗೂ ದೂರುಗಳನ್ನು ನಿಗದಿತ ಅವಧಿಯೊಳಗೆ ಸಲ್ಲಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ಗದಗ–ಬೆಟಗೇರಿ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತಾಳ ಹಾಕಿ, ಗ್ಯಾರಂಟಿ ಯೋಜನೆಯ ಹಾಡು ಹಾಡಿ, ಕಲಾಜಾಥಾ ಪ್ರಚಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ ಸಂತೋಷ ಲಾಡ್

# ಜನರ ಬದುಕು ಬದಲಿಸಿದ ಗ್ಯಾರಂಟಿ ಯೋಜನೆಗಳು



ಕ್ಷೇತ್ರ ಪ್ರಚಾರ ವಾಹನದೊಂದಿಗೆ ಕುಂದಗೋಳ ತಾಲೂಕಿನ ಹರ್ಲಾಪೂರ ಗ್ರಾಮದ ಶ್ರೀ ಸ್ವಾಮಿ ವಿವೇಕಾನಂದ ಜಾನಪದ ಕಲಾತಂಡದ ನಾಯಕರಾದ ದಾವಲಸಾಬ ದೊಡ್ಡಮನಿ ಅವರ ನೇತೃತ್ವದಲ್ಲಿ ಪ್ರಕಾಶ ಮಡಿವಾಳರ, ರಮೇಶ ಸಜ್ಜಗಾರ, ಗೂಳಪ್ಪ ದುರ್ಗಣ್ಣವರ, ನೌಶಾದ ಬೆಂತೂರ ಅವರು ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಕುರಿತು ಜನಪದ ಹಾಡುಗಳು ಹಾಗೂ ಬೀದಿ ನಾಟಕಗಳ ಮುಖಾಂತರ ಜನರಲ್ಲಿ ಜಾಗೃತಿ ಕಾರ್ಯಕ್ರಮವನ್ನು ನೀಡಿದರು.

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಪಂಚಗ್ಯಾರಂಟಿಗಳ ಸಮರ್ಥ ಜಾರಿಯಿಂದ ಸರ್ಕಾರ ಹೊಸ ದಾಖಲೆಗಳನ್ನು ನಿರ್ಮಿಸಿದೆ. ಸಾಮಾನ್ಯ ಜನರ ಬದುಕಿನಲ್ಲಿ ನೇರ ಬದಲಾವಣೆ ತರುವ ಉದ್ದೇಶದಿಂದ ಜಾರಿಗೊಂಡ ಈ ಯೋಜನೆಗಳು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲೂ ವ್ಯಾಪಕ ಪರಿಣಾಮ ಬೀರಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಕಲಘಟಗಿ ಪಟ್ಟಣ ಪಂಚಾಯಿತಿ ಮುಂಭಾಗದಲ್ಲಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಕ್ಷೇತ್ರ ಪ್ರಚಾರದ ಎಲ್‌ಇಡಿ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದರು.

ಕ್ಷೇತ್ರ ಪ್ರಚಾರ ವಾಹನವು ಧಾರವಾಡ ಜಿಲ್ಲೆಯಾದ್ಯಂತ ಒಟ್ಟು 20 ಹಳ್ಳಿಗಳಲ್ಲಿ ಸಂಚರಿಸಿ, ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಮಾಹಿತಿಯನ್ನು ಜನರಿಗೆ ತಲುಪಿಸಲಿದೆ. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿಯೂ ಯೋಜನೆಗಳ ಲಾಭಗಳ ಕುರಿತು ವಿವರಿಸಲಾಗುತ್ತದೆ ಎಂದು ಹೇಳಿದರು.

ಪಂಚ ಗ್ಯಾರಂಟಿ ಯೋಜನೆಗಳ ಪ್ರಯೋಜನ ಪ್ರತಿಯೊಬ್ಬ ಅರ್ಹ ನಾಗರಿಕರಿಗೆ ತಲುಪಬೇಕು. ಕ್ಷೇತ್ರ ಪ್ರಚಾರ ವಾಹನದ ಮೂಲಕ ಮನೆಮನೆಗೆ ತೆರಳಿ ಎಲ್ಲ ಜನರಿಗೂ ಮನಮುಟ್ಟುವಂತೆ ಪ್ರಚಾರ ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಚಾರಕ್ಕಾಗಿ ರೂಪುಗೊಂಡ ಕಲಾತಂಡಗಳೊಂದಿಗೆ ಸಚಿವರು ಸ್ವತಃ ಗೀತೆಗಳನ್ನು ಹಾಡಿ, ತಾಳ ಬಾರಿಸಿ ಕಲಾವಿದರನ್ನು ಪ್ರೋತ್ಸಾಹಿಸಿದರು. ▸▸ 4ನೇ ಪುಟಕ್ಕೆ

### ಸಂತ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ದುರಗೇಶ್ ಕೆ.ಆರ್

# ಸರ್ವಜ್ಞರ ವಿಚಾರಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಂತ ಕವಿ ಸರ್ವಜ್ಞರ ವಿಚಾರಧಾರೆಗಳನ್ನು ಪ್ರತಿಯೊಬ್ಬರೂ ಬದುಕಿನಲ್ಲಿ ಅಳವಡಿಸಿಕೊಂಡು ಸಮಾಜ ಸುಧಾರಣೆಗೆ ಶ್ರಮಿಸಬೇಕೆಂದು ಅಪರ ಜಿಲ್ಲಾಧಿಕಾರಿ ದುರಗೇಶ ಕೆ.ಆರ್ ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಹಾಲ್‌ನಲ್ಲಿ ಶುಕ್ರವಾರ ಜರುಗಿದ ಸಂತ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಪ್ರತಿಯೊಬ್ಬರೂ ಕವಿ ಸರ್ವಜ್ಞರ ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದಲ್ಲಿ ಅವರ ಆದರ್ಶಗಳನ್ನು ಪಾಲಿಸಬೇಕು. ಈಗಿನ ಮಕ್ಕಳಿಗೆ ಸರ್ವಜ್ಞರ ವಚನಗಳು, ಸಂಸ್ಕೃತಿ ಮತ್ತು ಮೌಲ್ಯಗಳ ಬಗ್ಗೆ ಅರಿವು ಮೂಡಿಸುವ ಕೆಲಸವಾಗಬೇಕು. ಸರ್ವಜ್ಞರು ತಮ್ಮ ವಚನಗಳ ಮೂಲಕ ಸಮಾಜದಲ್ಲಿನ ಅಂಕು–ಡೊಂಕು, ಮೂಢನಂಬಿಕೆಗಳನ್ನು ಹೋಗಲಾಡಿಸಿ ಲೋಕಕಲ್ಯಾಣಕ್ಕೆ ಶ್ರಮಿಸಿದ್ದಾರೆ. ಪಾಲಕರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಸಮಾಜದಲ್ಲಿ ಉನ್ನತ ಸ್ಥಾನ ಪಡೆಯಲು ಶ್ರಮಿಸಬೇಕು ಎಂದರು.

ಶಿವಾನಂದ ಚಕ್ರಸಾಲಿ ಉಪನ್ಯಾಸ ನೀಡಿ, ಸರ್ವಜ್ಞನ ವಿಚಾರಗಳು ಇಂದಿಗೂ ಪ್ರಸ್ತುತ. ಸಮಾಜದಲ್ಲಿನ ಜಾತಿ ಪದ್ಧತಿ, ಧಾರ್ಮಿಕ ಅಸಹಿಷ್ಣುತೆ, ಮತ್ತು ಮೌಲ್ಯಗಳ ಕುಸಿತವನ್ನು ಸರಿಪಡಿಸಲು ಸರ್ವಜ್ಞನ ತ್ರಿಪದಿಗಳು ದಿಕ್ಸೂಚಿಯಂತೆ ಇಂದಿಗೂ ಕೆಲಸ ಮಾಡುತ್ತವೆ. ನಮ್ಮ ಶಿಕ್ಷಣ ವ್ಯವಸ್ಥೆ ಕೇವಲ ಪುಸ್ತಕದ ಜ್ಞಾನ ನೀಡುತ್ತಿದೆ. ಆದರೆ ಸರ್ವಜ್ಞ ಹೇಳಿದ ಅನುಭವದ ಶಿಕ್ಷಣ ನಮಗೆ ಬೇಕಾಗಿದೆ. 'ಮಾತು ಬಲ್ಲವನಿಗೆ ಜಗಳವಿಲ್ಲ, ಊಟ ಬಲ್ಲವನಿಗೆ ರೋಗವಿಲ್ಲ' ಎಂಬ ಅವರ ಮಾತು ಇಂದಿನ ಒತ್ತಡದ ಬದುಕಿಗೆ ಮತ್ತು ಆರೋಗ್ಯಕ್ಕೆ ಸಂಜೀವಿನಿಯಂತಿದೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ಶಿವಾನಂದ ಚಕ್ರಸಾಲಿ ಮಾತನಾಡಿ, ಸಂತ ಕವಿ ಸರ್ವಜ್ಞ ಸುಮಾರು 16ನೇ ಶತಮಾನದಲ್ಲಿ ಜನಿಸಿದವರು. ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲೂಕಿನ ಅಬಲೂರು ಗ್ರಾಮದವರು. ತಂದೆ ಬಸವರಸ ಮತ್ತು ತಾಯಿ ಮಾಳೆಯ ಪುತ್ರನಾಗಿ ಜನಿಸಿದ ಇವರ ಮೂಲ ಹೆಸರು ಪುಷ್ಪದತ್ತ. ಲೋಕಸಂಚಾರ ಮಾಡುತ್ತಾ, ತಮ್ಮ ಅನುಭವದೊಂದಿಗೆ ಬೆಂದು, ಜ್ಞಾನವನ್ನೇ ಉಸಿರಾಗಿಸಿಕೊಂಡು ಅವರು 'ಸರ್ವಜ್ಞ'ರಾಗಿ ರೂಪುಗೊಂಡರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ, ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಮುದಾಯದ ಸಾಧಕರಿಗೆ ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ವಿ.ಆರ್. ಕುಂಬಾರ, ಮುರಿಗೆಪ್ಪ ಕೇರಿ, ಯಲ್ಲಪ್ಪ ಕುಂಬಾರ, ನಿಂಗಪ್ಪ ಕುಂಬಾರ, ಶರಣಮ್ಮ, ಈಶ್ವರಪ್ಪ ಕುಂಬಾರ, ಸಮಾಜದ ಮುಖಂಡರು, ಗಣ್ಯರು, ಮಹಿಳೆಯರು, ಸಾರ್ವಜನಿಕರರು ಉಪಸ್ಥಿತರಿದ್ದರು. ವೀರಣ್ಣ ಅಂಗಡಿ ಹಾಗೂ ಸಂಗಡಿಗರು ನಾಡಗೀತೆ ಪ್ರಸ್ತುತಪಡಿಸಿದರು.

# ಅಂಚೆ ಇಲಾಖೆ ಸೇವೆ ಸಮಾಜದ ಕಡೆಯ ವ್ಯಕ್ತಿಗೂ ಲಭಿಸಲಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಹಾಗೂ ಕೇಂದ್ರ ಸರ್ಕಾರದ ವಿವಿಧ ಜನಪರ ಯೋಜನೆಗಳನ್ನು ಅಂಚೆ ಇಲಾಖೆಯ ಮೂಲಕ ನೇರವಾಗಿ ಜನರ ಮನೆ ಬಾಗಿಲಿಗೆ ತಲುಪಿಸುವ ಕಾರ್ಯ ನಡೆಯುತ್ತಿದೆ. ಈ ಸೇವೆಗಳನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕರಾದ ಎಸ್.ಎಸ್. ಶಿರಹಟ್ಟಿ ಹೇಳಿದರು.

ಜಿಲ್ಲೆಯ ಮುಂಡರಗಿ ತಾಲೂಕಿನ ಹಮ್ಮಿಗಿಯ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ನಡೆದ 'ಅಂಚೆ ಸಂಪರ್ಕ ಅಭಿಯಾನ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ India Post Payments Bank (ಐಪಿಪಿಬಿ) ಮ್ಯಾನೇಜರ್ ಆನಂದ ಸಾಗರ ಮಾತನಾಡಿ, ಡಿಜಿಟಲ್ ಹಣಕಾಸು ವಹಿವಾಟು ಕ್ಷೇತ್ರದಲ್ಲಿ ಐಪಿಪಿಬಿ ಹೊಸ ಕ್ರಾಂತಿಯನ್ನುಂಟು ಮಾಡಿದೆ. ಕೇವಲ ಏಳು ವರ್ಷಗಳಲ್ಲಿ ದೇಶದ 10 ಕೋಟಿ ಜನರಿಗೆ ಡಿಬಿಟಿ ಸೇವೆ ಕಲ್ಪಿಸಿರುವುದು ಮಹತ್ವದ ಸಾಧನೆಯಾಗಿದೆ. ಈ ಯೋಜನೆಯ ಮೂಲಕ ಸರ್ಕಾರದ ಸಬ್ಸಿಡಿ ಹಾಗೂ ನೆರವು ನೇರವಾಗಿ ಲಾಭಾರ್ಥಿಗಳ ಖಾತೆಗೆ ಜಮೆಯಾಗುತ್ತಿದೆ ಎಂದು ಹೇಳಿದರು.

ಅಂಚೆ ಇಲಾಖೆ ಈಗ ಕೇವಲ ಪತ್ರ ವ್ಯವಹಾರಕ್ಕೆ ಸೀಮಿತವಾಗಿಲ್ಲ. ಬ್ಯಾಂಕಿಂಗ್ ಸೇವೆಗಳು, ವಿವಿಧ ಉಳಿತಾಯ ಯೋಜನೆಗಳು, ಜೀವ ವಿಮೆ, ಪಿಂಚಣಿ ವಿತರಣೆ, ಆನ್‌ಲೈನ್ ಪಾವತಿ, ಪಾರ್ಸಲ್ ವಿತರಣೆ ಸೇರಿದಂತೆ ಹಲವು ಆಧುನಿಕ ಸೇವೆಗಳನ್ನು ಜನರಿಗೆ ಒದಗಿಸಲಾಗುತ್ತಿದೆ. ಗ್ರಾಹಕರ ನಿರೀಕ್ಷೆಗೆ ತಕ್ಕಂತೆ ಸೇವೆ ನೀಡುವುದರಿಂದ, ದಿನನಿತ್ಯದ ಅಗತ್ಯಗಳಿಗೆ ಅಂಚೆ ಇಲಾಖೆಯೇ ವಿಶ್ವಾಸಾರ್ಹ ಕೇಂದ್ರವಾಗುತ್ತಿದೆ ಎಂದು ತಿಳಿಸಿದರು.

ಸಹಾಯಕ ಅಂಚೆ ಅಧೀಕ್ಷಕರಾದ ವಿ. ಸುನೀಲಕುಮಾರ ಹಾಗೂ ನಾಗರಾಜ ಮದ್ದಿನ ಮಾತನಾಡಿದರು. ಬಸಯ್ಯ ಕಲ್ಮಠ ಸಾನ್ನಿಧ್ಯ ವಹಿಸಿದ್ದರು. ಉಪ ಅಂಚೆ ಪಾಲಕ ಹಾಲಪ್ಪ ವಾಮನಕೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗ್ರಾಮ ಪಂಚಾಯತ್ ಅಧ್ಯಕ್ಷ ಶಿವಾನಂದ ಮೇಟಿ, ಸದಸ್ಯರಾದ ಎ.ಎಚ್. ಬಹದ್ದೂರ ದೇಸಾಯಿ, ಜಲಾನಸಾಬ ವಡ್ಡಟ್ಟಿ, ಅಂಚೆ ಸಹಾಯಕ ಮಧುಕುಮಾರ ಶಿರೋರ, ಅಂಚೆ ಮೇಲ್ವಿಚಾರಕರಾದ ರವಿ ಜಾಧವ್, ನಾಗರಾಜ ವಿಭೂತಿ, ಅಮರೇಶ ರಾಠೋಡ, ಹಮ್ಮಿಗಿ ಶಾಖಾ ಅಂಚೆ ಪಾಲಕರಾದ ಐಶ್ವರ್ಯ ಹಿರೇಮಠ, ಸಿಬ್ಬಂದಿಗಳಾದ ಅಶ್ವಿನಿ ಇನಾಮತಿ, ಹಾಲೇಶ ಹಂಸಭಾವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ವಿವಿಧೆಡೆ ಕವಿ ಸರ್ವಜ್ಞ ಜಯಂತ್ಯುತ್ಸವ ಆಚರಣೆ

# ಸರ್ವಜ್ಞರ ವಚನಗಳು ಸಮಾಜಕ್ಕೆ ದಾರಿದೀಪ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸರ್ವಜ್ಞರ ವಚನಗಳು ಜೀವನದ ಅನುಭವಗಳನ್ನು ಒಳಗೊಂಡಿವೆ. ಸಮಾಜದ ಅಂಕು–ಡೊಂಕುಗಳನ್ನು ತಿದ್ದುವ ಯತ್ನ ವಚನಗಳ ಮೂಲಕ ನಡೆದಿದೆ. ಅವರ ಆದರ್ಶಗಳನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ಮುಖ್ಯ ಶಿಕ್ಷಕ ಬಸವರಾಜ ಕುರಿ ಹೇಳಿದರು.

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಆಚರಿಸಲಾದ ಕವಿ ಸರ್ವಜ್ಞ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನರೇಗಲ್ಲ ಪಟ್ಟಣದ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಕವಿ ಸರ್ವಜ್ಞ ಜಯಂತ್ಯುತ್ಸವವನ್ನು ಆಚರಿಸಲಾಯಿತು. ಮುಖ್ಯ ಶಿಕ್ಷಕಿ ಬಿ.ಜಿ. ಶಿರ್ಸಿ, ಎಂ.ವಿ. ಕಡೆತೋಟದ, ವಿ.ಪಿ. ಗ್ರಾಮಪುರೋಹಿತ, ಎಸ್.ವಿ. ಹಿರೇಮಠ, ವಿ.ಎಸ್. ಜಾದವ್, ಎಸ್.ಕೆ. ಕುಲಕರ್ಣಿ, ಸಾವಿತ್ರಿ ಮಾನ್ವಿ, ಎಂ.ಎಂ. ಸಿಳ್ಳಿನ್, ಗೀತಾ ಶಿಂಧೆ, ಕೆ.ಐ. ಕೋಳಿವಾಡ, ಐ.ಬಿ. ಒಂಟೇಲಿ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ, ಅಕ್ಕಮಹಾದೇವಿ ಅಯ್ಯನಗೌಡ್ರ, ರಾಜೇಶ್ವರಿ ಈಟಿ, ಗೀತಾ ಕಂಬಳಿ, ರಜಿಯಾಬೇಗಂ, ವಿದ್ಯಾ ಮುಗಳಿ, ಜಯಶ್ರೀ ಮೆಣಸಗಿ, ಎಂ.ಎಸ್. ಧರ್ಮಾಯತ, ಎಸ್.ಎ. ಚೋಳಿನ, ಪಿ.ಎಸ್. ಅಂಗಡಿ, ಪದ್ಮಾವತಿ ಅಂಬಿಗೇರ, ಶ್ವೇತಾ ಹಿರೇಮಠ, ನೇತ್ರಾ ಸೋಬಾನದ, ನಂದಿತಾ ರಾಜೂರ ಸೇರಿದಂತೆ ಸಿಬ್ಬಂದಿ ಇದ್ದರು.

ಸರ್ವಕಾಲಿಕ ಸತ್ಯವನ್ನು ಪ್ರತಿಪಾದಿಸಿದ ಕವಿ ಸರ್ವಜ್ಞನ ವಚನಗಳು ಇಂದಿನ ಮಕ್ಕಳು, ಯುವಜನಾಂಗ ಹಾಗೂ ಸಮಾಜಕ್ಕೆ ದಾರಿದೀಪವಾಗಿವೆ. ಕವಿ ಸರ್ವಜ್ಞನ ವಚನಗಳು ಸಮಾಜ ಸುಧಾರಣೆಯ, ಜಾತ್ಯಾತೀತ, ಮಾನವೀಯ ಮೌಲ್ಯ ಹಾಗೂ ಸರ್ವಕಾಲಿಕ ಸತ್ಯವನ್ನು ಪ್ರತಿಪಾದಿಸುವ ವಚನಗಳಾಗಿವೆ. ಸರಳ, ಸಜ್ಜನಿಕೆ ಹಾಗೂ ಆದರ್ಶ ಗುಣಗಳನ್ನು ಹೊಂದಿದ್ದ ಸರ್ವಜ್ಞ ಸುಂದರ ಹಾಗೂ ಆದರ್ಶ ಸಮಾಜ ನಿರ್ಮಿಸಲು ನಿರಂತರವಾಗಿ ಶ್ರಮಿಸಿದ್ದಾರೆ ಎಂದರು.

ಜೆ.ಎ. ಪಾಟೀಲ, ಎನ್.ಎಲ್. ಚವ್ಹಾಣ, ಎಂ.ಪಿ. ಅಣಗೌಡರ, ಎಸ್.ಐ. ಜಗಾಪುರ, ರಾಜೇಶ್ವರಿ ಗವಳಿ, ಶಿಕ್ಷಕ ಡಿ.ವಿ. ಕಳ್ಳಿ ಇದ್ದರು.

ಬೂದಿಹಾಳ ಶಾಲೆಯಲ್ಲಿ: ಸಮೀಪದ ಬೂದಿಹಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ▸▸ 2ನೇ ಪುಟಕ್ಕೆ

# ಲಕ್ಕುಂಡಿಯಲ್ಲಿ ಶಿವಾಜಿ ಮಹಾರಾಜರ ಜಯಂತಿ ಸಡಗರದಿಂದ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿನ ಲಕ್ಕುಂಡಿ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಛತ್ರಪತಿ ಶಿವಾಜಿ ಮಹಾರಾಜ್ ಅವರ 396ನೇ ಜಯಂತಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಮಹಾರಾಷ್ಟ್ರದ ಶಿವನೇರಿ ಫೋರ್ಟ್‌ನಲ್ಲಿ 19 ಫೆಬ್ರವರಿ 1630ರಂದು ಜನಿಸಿದ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.


ಈ ಸಂದರ್ಭದಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಗೆ ಶಿವಾಜಿ ಮಹಾರಾಜರ ಜೀವನ ಚರಿತ್ರೆ, ಅವರ ಶೌರ್ಯ, ದೇಶಭಕ್ತಿ ಹಾಗೂ ಸ್ವರಾಜ್ಯ ಸ್ಥಾಪನೆಯ ಹೋರಾಟದ ಬಗ್ಗೆ ವಿವರಿಸಿದರು.

ಕಾರ್ಯಕ್ರಮದಲ್ಲಿ ಆರ್.ಬಿ. ಬರದ್ವಾಡ, ಹಿರಿಯ ಶಿಕ್ಷಕ ಬಸವರಾಜ ಆಯ್ ಗರ್ಜಪ್ಪನವರ, ಆರ್.ಎಂ. ದಂಡಿನ, ಅರ್ಜುನ ಚಲವಾದಿ, ಎ.ಎಂ. ದಂಡಿನ, ಪಿ.ಬಿ. ಬರದ್ವಾಡ ಹಾಗೂ ಲಕ್ಷ್ಮೀ ಗರ್ಜಪ್ಪನವರ ಉಪಸ್ಥಿತರಿದ್ದರು. ಕೊನೆಯಲ್ಲಿ ಮಕ್ಕಳಿಗೆ ಸಿಹಿ ವಿತರಿಸಲಾಯಿತು.

# ತೋಂಟದ ಸಿದ್ಧಲಿಂಗಶ್ರೀಗಳ ದತ್ತಿ ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಫೆ. 21ರಂದು ಸಂಜೆ 6.30 ಗಂಟೆಗೆ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ, ಕ.ಸಾ.ಪ ಕಾರ್ಯಾಲಯ ಗದಗ ಇಲ್ಲಿ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.



ಸಾನ್ನಿಧ್ಯವನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಸಮಾಜೋಧಾರ್ಮಿಕ ಕ್ಷೇತ್ರಕ್ಕೆ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಕೊಡುಗೆ ಕುರಿತು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಎ. ಬಳಿಗೇರ ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ದತ್ತಿ ದಾನಿಗಳಾದ ಸುರೇಖಾ ಸದಾನಂದ ಪಿಳ್ಳಿ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಪರಿಷತ್ತಿನ ಸದಸ್ಯರು, ಸಾಹಿತ್ಯಾಭಿಮಾನಿಗಳು, ಸಹೃದಯರು ಆಗಮಿಸಲು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ವಜ್ಞರ ವಚನಗಳು ಸಮಾಜಕ್ಕೆ ದಾರಿದೀಪ

▸▸ಮೊದಲನೇ ಪುಟದಿಂದ

ಶುಕ್ರವಾರ ಸಂತ ಕವಿ ಸರ್ವಜ್ಞ ಜಯಂತ್ಯುತ್ಸವ ಆಚರಿಸಲಾಯಿತು.

ಮುಖ್ಯ ಶಿಕ್ಷಕರಾದ ಸಿ.ಕೆ. ಕೇಸರಿ ಮಾತನಾಡಿ, ಕವಿ ಸರ್ವಜ್ಞ ಸೌಜನ್ಯಶೀಲ, ವಿಧೇಯಕ, ಗೌರವಯುತವಾಗಿ ಬದುಕಿ ಸಮಾಜ ತಿದ್ದುವ ಕೆಲಸ ಮಾಡಿದ್ದಾರೆ ಎಂದರು. ಅತಿಥಿ ಶಿಕ್ಷಕಿಯರಾದ ದೀಪಾ ಪೂಜಾರ, ಸರಸ್ವತಿ ಪೂಜಾರ, ದೀಪಾ ತುಕ್ಕೋಜಿ ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಇದ್ದರು.

## ಕದಾಂಪುರದ ಬಿ.ಎಂ. ಹೊಸೂರ್ ಸರ್ಕಾರಿ ಪ್ರೌಢಶಾಲೆಯಲ್ಲಿ ಮಿಷನ್ 40 ಪ್ಲಸ್

# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಹೊಸ ದಿಕ್ಕು



ಮುಂಡರಗಿ ತಾಲೂಕಿನ ಡಂಬಳ ಹೋಬಳಿಯ ಕದಾಂಪುರ ಗ್ರಾಮದ ಪ್ರತಿಷ್ಠಿತ ಶ್ರೀ ಬಿ.ಎಂ. ಹೊಸೂರ್ ಸರ್ಕಾರಿ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಹಿತಕ್ಕಾಗಿ ಖಾಸಗಿ ಶಾಲೆಗಳಿಗೆ ಕಡಿಮೆ ಇಲ್ಲದಂತೆ ಹತ್ತು ಹಲವು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ.

ಕಲಿಕಾಂಶ ಮಿಷನ್ 40 ಪ್ಲಸ್ ನಾಮಫಲಕಗಳ ಮೂಲಕ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಹೊಂದಬೇಕು ಎನ್ನುವ ಹಿನ್ನೆಲೆಯಲ್ಲಿ ಪ್ರತಿ ವಿಷಯವಾರು ಫಲಕ ನಿರ್ಮಾಣ ಮಾಡಿಸಿದ ಶಿಕ್ಷಕರಾದ ಕನ್ನಡ ಶಿಕ್ಷಕ ಬಿ.ಡಿ. ಅರ್ಜನಾಳ, ವಿಜ್ಞಾನ ಶಿಕ್ಷಕಿ ಎಸ್.ವಿ. ಪಾಟೀಲ, ಹಿಂದಿ ಶಿಕ್ಷಕಿ ಜಿ.ಡಿ. ಗದಗಿನ, ಗಣಿತ ಶಿಕ್ಷಕ ಬಿ.ಎನ್. ಉಕ್ಕುಂದ, ಇಂಗ್ಲಿಷ್ ಶಿಕ್ಷಕ ಎಸ್.ಸಿ. ಕಂಪನಾಯಕ, ಸಮಾಜ ವಿಜ್ಞಾನ ಶಿಕ್ಷಕ ಜಿ.ಕೆ. ತಳಗೇರಿ, ಮುಖ್ಯೋಪಾಧ್ಯಾಯ ಎ.ಎಲ್. ಬಿಜಾಪುರ ಅವರ ಸಹಕಾರದಿಂದ ಎಲ್ಲಾ ಶಿಕ್ಷಕರು 30 ಸಾವಿರ ರೂ ಹಣ ಸೇರಿಸಿ ಮಿಷನ್ 40 ಪ್ಲಸ್ ಕಲಿಕಾ ನಾಮಫಲಕಗಳನ್ನು ಸ್ಥಾಪಿಸಿದ್ದಾರೆ.

ಇಕೋ ಕ್ಲಬ್ ಚಟುವಟಿಕೆಗಳ ಮೂಲಕ ಕೈ ತೋಟ, ಪಂಚವಟಿ, ವಿವಿಧ ತರಕಾರಿಗಳು, ಗಾರ್ಡನ್, ವಿದ್ಯಾರ್ಥಿಗಳ ಓದುವಿಕೆಗೆ ಆಸನಗಳು, ಔಷಧ ಸಸ್ಯಗಳು, ಶಾಲಾ ಕಂಪೌಡ್, ಗಿಡಗಳು, ಎರೆಹುಳು ತೊಟ್ಟಿ ನಿರ್ಮಾಣ, ಪ್ಲಾಸ್ಟಿಕ್ ಮುಕ್ತ ವಾತಾವರಣದ ಮೂಲಕ ವಿದ್ಯಾರ್ಥಿಗಳಲ್ಲಿ ಪರಿಸರ ಸ್ನೇಹಿ ನಡವಳಿಕೆ, ಸುಸ್ಥಿರ ಅಭಿವೃದ್ಧಿ ಮತ್ತು ಪ್ರಕೃತಿ ಸಂರಕ್ಷಣೆಯ ಮೌಲ್ಯಗಳನ್ನು ಬೆಳೆಸುತ್ತಿದ್ದಾರೆ.

ವಿಜ್ಞಾನ ಪ್ರಯೋಗಾಲಯ, ಕಂಪ್ಯೂಟರ್ ಲ್ಯಾಬ್, ಒಂದು ಸ್ಮಾರ್ಟ್ ಕ್ಲಾಸ್, ಎರಡು ಪ್ರೊಜೆಕ್ಟರ್ ಕೊಠಡಿಗಳು, ಇ-ಸಂವೇದನಾ ತರಗತಿಗಳು, ಗಣಕಯಂತ್ರ ಲ್ಯಾಬ್ ಟ್ಯಾಬ್‌ಗಳ ಮೂಲಕ ವಿದ್ಯಾರ್ಥಿಗಳಿಗೆ ಜ್ಞಾನದ ಸುಧೆಯನ್ನು ಖಾಸಗಿ ಶಾಲೆಗಳಿಗೆ ಕಡಿಮೆ ಇಲ್ಲದಂತೆ ಆದರ್ಶ ಶಾಲೆಯಾಗಿದೆ.

ಸರಕಾರದ ಪರೀಕ್ಷಾ ಮಂಡಳಿ ಹೊರಡಿಸಿದ ನೀಲನಕ್ಷೆಯ ಆಧಾರದಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳನ್ನು ಅಭ್ಯಾಸದಲ್ಲಿ ತೊಡಗಿಸಲಾಗಿದೆ. ನಾಲ್ಕು ಮಾದರಿ ಪ್ರಶ್ನೆ ಪತ್ರಿಕೆಗಳನ್ನು ನೀಡಿ ಅಧ್ಯಯನದಲ್ಲಿ ತೊಡಗಿಸಲಾಗಿದೆ. ಮುಂಜಾನೆ 8.30ರಿಂದ 9.30ರವರೆಗೆ ವಿಷಯವಾರು ವಿಶೇಷ ತರಗತಿ, ಓದಿನ ಮನೆಯಲ್ಲಿ ವಿದ್ಯಾರ್ಥಿನಿಯರಿಗೆ ಸಂಜೆ 4 ಗಂಟೆಯಿಂದ 6 ಗಂಟೆಯವರೆಗೆ ವಿದ್ಯಾರ್ಥಿಗಳಿಗೆ ಸಂಜೆ 4 ಗಂಟೆಯಿಂದ 7.30ರವರಗೆ ಅಧ್ಯಯನದಲ್ಲಿ ತೊಡಗಿಸುವ ಕಾರ್ಯ ನಿರಂತರವಾಗಿ ನಡೆದಿದೆ.

ಗ್ರಾಮೀಣ, ತಾಲೂಕು, ಜಿಲ್ಲಾ ಮಟ್ಟದ ಹಲವು ಕ್ರೀಡೆಗಳಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದರೆ, ಉತ್ತಮ ಸಾಧನಾ ಇನ್ಸ್‌ಪೈರ್ ಯೋಜನೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳು 10 ಸಾವಿರ ರೂ ಪಡೆದುಕೊಂಡಿದ್ದಾರೆ. ಅಲ್ಲದೆ ಯೋಗಾಸನ ಪ್ರದರ್ಶನದಲ್ಲಿ ರಾಜ್ಯ ಮಟ್ಟದಲ್ಲಿ ಪೂರ್ಣಿಮಾ ಕಟ್ಟಿಗಾರ ದ್ವಿತೀಯ ಸ್ಥಾನ ಪಡೆದು ಉತ್ತಮ ಸಾಧನೆ ಮಾಡಿದ್ದಾರೆ.

ಈ ಕುರಿತು ಗದಗ ಜಿಲ್ಲಾ ಡಿಡಿಪಿಐ ಆರ್.ಎಸ್. ಬುರಡಿ ಸಂದೇಶ ನೀಡಿದ್ದು, ವಿದ್ಯಾರ್ಥಿಗಳು ಆಸಕ್ತಿಯಿಂದ ಅಧ್ಯಯನ ಮಾಡಿ. ಪ್ರತಿ ದಿನ ಓದುವ ಅಭ್ಯಾಸವನ್ನು ಬೆಳೆಸಿಕೊಳ್ಳಿ. ಪ್ರಶ್ನೆಗಳನ್ನು ಕೇಳುವ ಮನೋಭಾವ, ಶಿಸ್ತು, ಆತ್ಮವಿಶ್ವಾಸ ಮತ್ತು ಪರಿಶ್ರಮವೇ ನಿಮ್ಮ ಯಶಸ್ಸಿನ ಗುಟ್ಟು ಶಿಕ್ಷಕರ ಮಾರ್ಗದರ್ಶನವನ್ನು ಗೌರವಿಸಿ, ಪೋಷಕರ ಸಹಕಾರವನ್ನು ಸದ್ಬಳಕೆ ಮಾಡಿಕೊಳ್ಳಿ. ಪರೀಕ್ಷೆ ಎಂದರೆ ಭಯಪಡುವ ವಿಷಯವಲ್ಲ. ಪರೀಕ್ಷೆಗಳು ಭವಿಷ್ಯವನ್ನು ರೂಪಿಸುವ ಬುಗ್ಗೆಗಳು. ಆದ್ದರಿಂದ ಆತ್ಮಸ್ಥೈರ್ಯದಿಂದ, ನಂಬಿಕೆಯಿಂದ ಮತ್ತು ಸಕಾರಾತ್ಮಕ ಚಿಂತನೆಯೊಂದಿಗೆ ಮುಂದುವರೆಯಿರಿ ಎಂದು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮೂಡಿಸಿದ್ದಾರೆ.

– ಕೆ.ಆರ್. ದೊಡ್ಡಮನಿ.

> ಎಸ್‌ಎಸ್‌ಎಲ್‌ಸಿಯಲ್ಲಿ ವಿದ್ಯಾರ್ಥಿಗಳ ಉತ್ತಮ ಫಲಿತಾಂಶ ಮತ್ತು ಪ್ರತಿ ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಮುನ್ನೆಲೆಗೆ ಬರಬೇಕು ಎನ್ನುವ ಉದ್ದೇಶದಿಂದ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲಾ ಶಿಕ್ಷಕರು ಸಿಬ್ಬಂದಿ ವರ್ಗದವರ ಸಹಕಾರದೊಂದಿಗೆ ಶ್ರಮಿಸಲಾಗುತ್ತಿದೆ.
>
> – ಎ.ಎಲ್. ಬಿಜಾಪುರ.
>
> ಮುಖ್ಯೋಪಾಧ್ಯಾಯರು, ಶ್ರೀ ಬಿ.ಎಂ. ಹೊಸೂರ್ ಪ್ರೌಢಶಾಲೆ ಕದಾಂಪುರ.


# ಸಹಕಾರಿ ಸಂಘಕ್ಕೆ ಅವಿರೋಧ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಕೋಟುಮಚಗಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಿ.ನಂ-2ರ ಚುನಾವಣೆಯು ಶುಕ್ರವಾರ ಜರುಗಿದ್ದು, ಯಲ್ಲಪ್ಪ ಗುರಿಕಾರ ಅಧ್ಯಕ್ಷರಾಗಿ, ಬಸವರಾಜ ನವಲಗುಂದ ಉಪಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸದಸ್ಯರಾಗಿ ಈರಪ್ಪ ನೇಗಲಿ, ಮಹಬೂಬಸಾಬ ಘಟ್ಟದ, ವೀರಪ್ಪ ಶಿವಶಿಂಪರ, ಫಕೀರಪ್ಪ ಭಜಂತ್ರಿ, ಸಕ್ರಪ್ಪ ವಾಲ್ಮೀಕಿ, ಪ್ರಕಾಶ ಮುಧೋಳ, ಅಶೋಕ ಬ್ಯಾಹಟ್ಟಿ, ಬಸವಣ್ಣೆವ್ವ ಸಂಕನಗೌಡ್ರ, ಯಲ್ಲವ್ವ ಕಮ್ಮಾರ, ಶಂಕ್ರಪ್ಪ ದಿವಟಿ ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ವಿದ್ಯಾಧರ ದೊಡ್ಡಮನಿ, ಶರಣಪ್ಪ ಮ್ಯಾಗೇರಿ, ಮಲ್ಲಿಕಾರ್ಜುನ ಅಣ್ಣಿಗೇರಿ, ಮಾರುತಿ ಪೂಜಾರ, ಸುಭಾಸ ಅಬ್ಬಿಗೇರಿ, ಬಸಪ್ಪ ಕರಡಿ, ಶಂಕರ ಕುರಹಟ್ಟಿ, ವೀರಪ್ಪ ಸಂಗಟಿ, ವ್ಯವಸ್ಥಾಪಕ ಎಲ್.ಬಿ. ಸಂಕನಗೌಡ್ರ ಇದ್ದರು.



# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೈಪಿಡಿ ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಮಹರ್ಷಿ ವಾಲ್ಮೀಕಿ ಭವನದಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗಾಗಿ ಪರೀಕ್ಷಾ ಕೈಪಿಡಿ ಬಿಡುಗಡೆ ಕಾರ್ಯಕ್ರಮ ನಡೆಯಿತು. ಈ ಕಾರ್ಯಕ್ರಮದ ಮೂಲಕ Edukind Educational Charitable Trust (ರಿ.) ಅನ್ನು ಅಧಿಕೃತವಾಗಿ ಉದ್ಘಾಟಿಸಲಾಯಿತು.

ತಾಲೂಕು ಸಮಾಜ ಕಲ್ಯಾಣ ಇಲಾಖೆ ಹಾಗೂ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ, ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ತಾಲೂಕಿನ ವಿವಿಧ ವಿದ್ಯಾರ್ಥಿ ನಿಲಯಗಳಲ್ಲಿ ಓದುತ್ತಿರುವ 230 ವಿದ್ಯಾರ್ಥಿಗಳಿಗೆ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಪೂರ್ವ ತರಬೇತಿ ನೀಡಲಾಗಿದ್ದು, ಉಚಿತವಾಗಿ ಪರೀಕ್ಷಾ ಕೈಪಿಡಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಸಮಾಜ ಕಲ್ಯಾಣಾಧಿಕಾರಿ ಜಗದೀಶ್ ದಿಡಗೂರು ಮಾತನಾಡಿ, ವಿದ್ಯಾರ್ಥಿಗಳು ನೀಡಿರುವ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಉತ್ತಮ ಫಲಿತಾಂಶ ಸಾಧಿಸಬೇಕು ಎಂದು ಕರೆ ನೀಡಿದರು. ಟ್ರಸ್ಟ್‌ನ ಸಾಮಾಜಿಕ ಸೇವಾ ಕಾರ್ಯವನ್ನು ಶ್ಲಾಘಿಸಿದರು.

ಕಾರ್ಯಕ್ರಮವನ್ನು ನಿಲಯಪಾಲಕ ನಾಗರಾಜ್ ಬಿ. ನಿರೂಪಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಮಂಜುನಾಥ ಎಂ. ಹಾಗೂ ಆನಂದ್ ಕಡ್ಲಿ ಭಾಗವಹಿಸಿದ್ದರು. ಟ್ರಸ್ಟ್ ಪರವಾಗಿ ಯುವ ಬರಹಗಾರ ಮೆಹಬೂಬ್ ಬಾಷಾ ಮಾತನಾಡಿದರು.

ಈ ಸಂದರ್ಭದಲ್ಲಿ ಎಂ. ಶಿವಮೂರ್ತಿ (ಸಂಪಾದಕರು, ದಿ ಹಂಪಿ ವರ್ಲ್ಡ್), ಇಲಾಖೆಯ ಐ. ಜಯಮ್ಮ, ಜ್ಯೋತಿ, ಗೀತಾ, ವಾರ್ಡನ್ ಸೋಮಣ್ಣ, ನಾಗರಾಜ್, ಚಂದ್ರನಾಯಕ, ಮಧು, ಇಲಾಖೆಯ ಮ್ಯಾನೇಜರ್ ಶೋಭಾ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಟ್ರಸ್ಟ್ ಸಂಸ್ಥಾಪಕರಾದ ಬಿ.ಬಿ.ಜಿ. ಗೌತಮ್ ಹಾಗೂ ಸದಸ್ಯರಾದ ರಾಘವೇಂದ್ರ ಮಡಿಕೇಶ್ವರ ಮತ್ತು ಬಿ.ಬಿ.ಜಿ. ಬಾಬಾ ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಶಿವಾಜಿ ಮಹಾರಾಜರು ಹಿಂದೂ ಸಮಾಜದ ಬೆಳಕು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ದುರ್ಗಾದೇವಿ ದೇವಸ್ಥಾನದ ಹತ್ತಿರ ಛತ್ರಪತಿ ಶಿವಾಜಿ ಮಹಾರಾಜರ 399ನೇ ಜಯಂತಿಯನ್ನು ಸಮಾಜ ಬಾಂಧವರು, ಸಾರ್ವಜನಿಕರು ಆಚರಿಸಿದರು.

ಈ ವೇಳೆ ಮಾತನಾಡಿದ ಯುವ ಮುಖಂಡರಾದ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಛತ್ರಪತಿ ಶಿವಾಜಿ ಮಹಾರಾಜರು ಒಬ್ಬ ಮಹಾನ್ ಯೋಧರಾಗಿದ್ದು, ಅವರು ತಮ್ಮ ಶೌರ್ಯ, ನಾಯಕತ್ವದಲ್ಲಿ ವೈರಿಗಳಿಗೆ ನಡುಕು ಹುಟ್ಟಿಸಿದ್ದರು. ಹಿಂದೂ ಸಮಾಜದ ಮಹಾನ್ ಕೀರ್ತಿಶಿಖರವಾಗಿ ಶಿವಾಜಿ ಮಹಾರಾಜರು ಬೆಳಗಿ ನಿಂತರು. ಉತ್ತಮ ಆಡಳಿತ, ಎಲ್ಲಾ ಧರ್ಮಗಳಿಗೆ ಗೌರವ ಮತ್ತು ತಮ್ಮ ಜನರ ಯೋಗಕ್ಷೇಮದ ಮೇಲೆ ಗಮನಹರಿಸಿದರು. ಬಲವಾದ ನಾಯಕತ್ವವು ಅವರನ್ನು ಭಾರತದ ಶ್ರೇಷ್ಠ ರಾಜರಲ್ಲಿ ಒಬ್ಬರನ್ನಾಗಿ ಮಾಡಿದ್ದು, ಧೈರ್ಯ, ಪ್ರಾಮಾಣಿಕತೆ ಮತ್ತು ದೇಶಭಕ್ತಿಯನ್ನು ಯುವಕರಲ್ಲಿ ಬಿತ್ತುವಂತೆ ಮಾಡಿತ್ತು ಎಂದು ಹೇಳಿದರು. ಪಿಎಸ್‌ಐ ನಾಗರಾಜ ಗಡಾದ ಮಾತನಾಡಿದರು. ಪ್ರಕಾಶ ಗುತ್ತಲ, ಹೊನ್ನಪ್ಪ ವಡ್ಡರ, ನವೀನ ಬೆಳ್ಳಟ್ಟಿ, ಗುರಪ್ಪ ಮುಳಗುಂದ, ಖಂಡಪ್ಪ ಅಣ್ಣಿಗೇರಿ, ರಮೇಶ ಕಾಳೆ, ಮಲ್ಲೇಶ ಚಿಕ್ಕೇರಿ, ಶಂಕರ ಶಳಕೆ ಸೇರಿದಂತೆ ಮುಂತಾದವರಿದ್ದರು.

## ಗದಗ ರಾಮಕೃಷ್ಣ-ವಿವೇಕಾನಂದ ಆಶ್ರಮದಲ್ಲಿ ರಾಮಕೃಷ್ಣರ ಜಯಂತಿ ಆಚರಣೆ

# ಸ್ವತಂತ್ರ ಭಾರತ ನಿರೀಕ್ಷಿತ ಅಭಿವೃದ್ಧಿ ಹೊಂದಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸ್ವತಂತ್ರಗೊಂಡು 80 ವರ್ಷ ಕಳೆದರೂ ನಿರೀಕ್ಷಿತ ಅಭಿವೃದ್ಧಿಯಾಗಿಲ್ಲ. ಭವಿಷ್ಯದ ಮುಂದಾಲೋಚನೆ ಇಲ್ಲದ ರಾಜನೀತಿ, ಆಡಳಿತ ವರ್ಗವು ಜನತೆಯ ನಿರೀಕ್ಷೆಗಳನ್ನು ಸಾಕಾರಗೊಳಿಸದೇ ಟೋಪಿ ಹಾಕುತ್ತಲೇ ಬಂದಿವೆ ಎಂದು ಗದಗ-ಬಿಜಾಪೂರ ರಾಮಕೃಷ್ಣ ಆಶ್ರಮದ ಪೂಜ್ಯ ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಹೇಳಿದರು.



ಗುರುವಾರ ಗದುಗಿನ ರಾಮಕೃಷ್ಣ-ವಿವೇಕಾನಂದ ಆಶ್ರಮದಲ್ಲಿ ಭಗವಾನ ಶ್ರೀ ರಾಮಕೃಷ್ಣರ 191ನೇ ಜಯಂತಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ದೇಶದಲ್ಲಿ ಆಯುಧಗಳಿಗೆ ಕೊರತೆ ಇಲ್ಲ. ಆದರೆ ಜನತೆಗೆ ಜ್ಞಾನದ ಕೊರತೆ ಇದೆ, ಪ್ರಜ್ಞೆ, ವೈಚಾರಿಕತೆಯ ಕೊರತೆ ಇದೆ. ಶಿಕ್ಷಣ ಎಂದರೆ ಅಂಕಗಳನ್ನು ಗಳಿಸುವುದೇ ಮಾನದಂಡವೆಂದು ಅರಿತಿದ್ದೇವೆ.

ಭಾರತೀಯರಲ್ಲಿ ಆತ್ಮಾಭಿಮಾನ ಕ್ಷೀಣಿಸುತ್ತಿದೆ. ಆತ್ಮಾಭಿಮಾನ, ಸ್ವಾಭಿಮಾನ ಇಲ್ಲದ ಬದುಕು ಬದುಕೇ ಅಲ್ಲ ಎಂದು ಪ್ರತಿಪಾದಿಸಿದ ಸ್ವಾಮೀಜಿ, ನಮ್ಮ ಭಾರತೀಯ ಯುವಕರು ಮನಸ್ಸು ಮಾಡಿದರೆ ಏನೆಲ್ಲಾ ಆಗಲು ಸಾಧ್ಯವಿದೆ. ಸಾಧಿಸಬೇಕೆಂಬ ಛಲ ಬೇಕು ಅಷ್ಟೇ. ನಮ್ಮ ಯುವಕರು ಪುಟಿದೆದ್ದರೆ ಅಸಾಧ್ಯವಾದದ್ದನ್ನು ಸಾಧ್ಯಗೊಳಿಸುವ ಛಲಗಾರರು. ಭಾರತೀಯರ ರಕ್ತದಲ್ಲಿನ ಕೆಚ್ಚು ಪ್ರಪಂಚದ ಬೇರೆ ಯಾವ ದೇಶಬಾಂಧವರ ರಕ್ತದಲ್ಲಿ ಇಲ್ಲ. ಆದರೆ ನಮ್ಮವರು ಗಾಢ ನಿದ್ರೆಯಲ್ಲಿದ್ದರೆ ಅವರನ್ನು ಜಾಗ್ರತಿಗೊಳಿಸಬೇಕಿದೆ ಎಂದರು.

ಇಂದು ಭಗವಾನ್ ಶ್ರೀ ರಾಮಕೃಷ್ಣರ 191ನೇ ಜಯಂತಿಯನ್ನು ಕೇವಲ ಭಾರತೀಯರಷ್ಟೇ ಅಲ್ದೆ ವಿಶ್ವದ ವಿವಿಧೆಡೆ ಆಚರಿಸಲಾಗುತ್ತಿದೆ. ರಾಮಕೃಷ್ಣರು ಮಾನವ ಕುಲಕ್ಕೆ, ಆಧ್ಯಾತ್ಮ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅನುಪಮವಾದದ್ದು. ರಾಮಕೃಷ್ಣರಲ್ಲಿ ಇದ್ದ ಜ್ಞಾನ ಸಂಪತ್ತಿನಲ್ಲಿ ಶೇ. 1ರಷ್ಟು ಸದ್ಬಳಕೆ ಮಾಡಿಕೊಂಡಿದ್ದರೆ ವಿಶ್ವವಿಖ್ಯಾತಿ ಆಗಲು ಸಾಧ್ಯವಿದೆ. ಅಂತಹ ಅದ್ಭುತ ಜ್ಞಾನದ ನಿಧಿ ಅವರು ಎಂದು ಬಣ್ಣಿಸಿದರು.

> ರಾಷ್ಟ್ರಕವಿ ಕುವೆಂಪು ಜ್ಞಾನಪೀಠ ಪ್ರಶಸ್ತಿ ಸ್ವೀಕರಿಸುವ ಸಂದರ್ಭದಲ್ಲಿ ಭಗವಾನ್ ಶ್ರೀ ರಾಮಕೃಷ್ಣರನ್ನು ಸ್ಮರಿಸಿಕೊಂಡ ಸಂಗತಿ ಇತಿಹಾಸದ ಪುಟ ಸೇರಿದೆ.
>
> ರಾಮಕೃಷ್ಣರ ಬಗ್ಗೆ ಕುವೆಂಪು ಅಪಾರ ಶ್ರದ್ಧಾ-ಭಕ್ತಿ ಹೊಂದಿದ್ದರು. ಶ್ರೀ ರಾಮಕೃಷ್ಣರ ತತ್ವ-ಸಿದ್ಧಾಂತಗಳಲ್ಲಿ ಕೆಲವನ್ನು ಮಾತ್ರ ಪಾಲಿಸಿದವರೂ ಉನ್ನತ ಮೇಧಾವಿಗಳಾಗಿ ಹೊರಹೊಮ್ಮಿದ್ದಾರೆ.
>
> ಇಂದಿನ ಯುವ ಜನಾಂಗ ಶ್ರೀ ರಾಮಕೃಷ್ಣ- ವಿವೇಕಾನಂದ ಜೀವನ ಚರಿತ್ರೆ, ತತ್ವ ಸಿದ್ಧಾಂತಗಳನ್ನು ಅಧ್ಯಯನ ಮಾಡಬೇಕು. ಅವುಗಳಲ್ಲಿ ಒಂದಿಷ್ಟು ಜೀವನದಲ್ಲಿ ಅಳವಡಿಸಿಕೊಂಡಲ್ಲಿ ಉನ್ನತ ವ್ಯಕ್ತಿತ್ವ ಅತ್ಯುನ್ನತ ಸ್ಥಾನಕ್ಕೇರಲು ಸಾಧ್ಯವಿದೆ ಅಂತಹ ಪ್ರಯತ್ನ ಇಂದಿನಿಂದಲೇ ಆರಂಭಗೊಳ್ಳಲಿ ಎಂದು ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಹೇಳಿದರು.

ಸಮಾರಂಭದಲ್ಲಿ ಸಾಧಕ ಮಹನೀಯರನ್ನು ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆಯ ಮೇಲೆ ಪೂಜ್ಯ ಜಗನ್ನಾಥನಂದಜೀ, ಬೆಂಗಳೂರಿನ ರಾಮಕೃಷ್ಣ ಆಶ್ರಮದ ಪೂಜ್ಯ ಮಾತಾಜೀ ವೋಕ್ಷಾಪ್ರಾಣಾನಂದಜೀ ಉಪಸ್ಥಿತರಿದ್ದರು.

ಭಗವಾನ್ ಶ್ರೀ ರಾಮಕೃಷ್ಣರ 191ನೇ ಜಯಂತಿಯ ಅಂಗವಾಗಿ ಆಶ್ರಮದಲ್ಲಿ ಬೆಳಿಗ್ಗೆ ಮಂಗಳಾರತಿ, ಉಷಃಕೀರ್ತನೆ, ಹೋಮ ಹಾಗೂ ವಿಷ್ಣುಸಹಸ್ರನಾಮ ಪಾರಾಯಣ, ಭಜನೆ ಮಹಾಪ್ರಸಾದ ಜರುಗಿ-ತು. ಸಂಜೆ ಭಜನೆ, ಹರಿಕಥೆ, ಆಶೀರ್ವಚನ, ಪ್ರಸಾದ ಜರುಗಿತು. ಕಾರ್ಯಕ್ರಮಗಳಲ್ಲಿ ಗಣ್ಯಮಹನೀಯರು, ಆಶ್ರಮದ ಎಲ್ಲ ಸೇವಾ ಸಮಿತಿಯ ಸದ್ಭಕ್ತರು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

### 'ಇನ್ಫೋಸಿಸ್ ಪ್ರತಿಷ್ಠಾನ-ಪುಲಿಗೆರೆ ಉತ್ಸವ'ಕ್ಕೆ ವಿದ್ಯುಕ್ತ ಚಾಲನೆ

# ಸಂಸ್ಕೃತಿ, ಸಂಪ್ರದಾಯಗಳನ್ನು ಉಳಿಸುವುದು ನಮ್ಮೆಲ್ಲರ ಜವಾಬ್ದಾರಿ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ 3 ದಿನಗಳ ಕಾಲ ಇನ್ಫೋಸಿಸ್ ಪ್ರತಿಷ್ಠಾನ, ಭಾರತೀಯ ವಿದ್ಯಾಭವನ ಮತ್ತು ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಸಹಯೋಗದಲ್ಲಿ ಹಮ್ಮಿಕೊಂಡಿರುವ 'ಇನ್ಫೋಸಿಸ್ ಪ್ರತಿಷ್ಠಾನ-ಪುಲಿಗೆರೆ ಉತ್ಸವ' ಶುಕ್ರವಾರ ವಿದ್ಯುಕ್ತವಾಗಿ ಆರಂಭಗೊಂಡಿತು.

ಮೊದಲ ದಿನ ಶುಕ್ರವಾರ ಪ್ರಾತಃಕಾಲ ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮಿ ಕೆ.ರಾವ್ ಮತ್ತು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ ಸೋಮೇಶ್ವರ ದೇವರಿಗೆ ಪುಷ್ಪಗಳನ್ನು ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ನಾಗಲಕ್ಷ್ಮೀ ಕೆ.ರಾವ್, ಇದೊಂದು ಐತಿಹಾಸಿಕ ದೇವಸ್ಥಾನವಾಗಿದ್ದು, ಇಲ್ಲಿನ ಸಂಸ್ಕೃತಿ, ಸಂಪ್ರದಾಯಗಳನ್ನು ಉಳಿಸಿ ಬೆಳೆಸಿಕೊಂಡು ಹೋಗುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಇನ್ಫೋಸಿಸ್ ಮುಖ್ಯಸ್ಥೆ ಡಾ. ಸುಧಾಮೂರ್ತಿಯವರು ಶೈಕ್ಷಣಿಕ, ಧಾರ್ಮಿಕ ಮತ್ತು ಸಾಮಾಜಿಕ ಕಾರ್ಯಗಳನ್ನು ಮಾಡುತ್ತಿದ್ದು, ಸೋಮೇಶ್ವರನ ಸನ್ನಿಧಿಯಲ್ಲಿ ಈ ರೀತಿ ನಿರಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುವಂತಾಗಲಿ ಎನ್ನುವ ಉದ್ದೇಶದಿಂದ ಇಂತಹ ವೈಶಿಷ್ಟ್ಯಪೂರ್ಣ ಉತ್ಸವವನ್ನು ಕಳೆದ 8 ವರ್ಷಗಳಿಂದ ಸಂಘಟಿಸುತ್ತಾ ಬರಲಾಗಿದೆ.

ಈ ಕಾರ್ಯಕ್ರಮಕ್ಕೆ ಎಲ್ಲರೂ ಸಹಕಾರ ನೀಡುವಂತೆ ಮನವಿ ಮಾಡಿದರು.

ಈ ವೇಳೆ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ, ಚಂಬಣ್ಣ ಬಾಳಿಕಾಯಿ, ಸಿ.ಆರ್. ಲಕ್ಕುಂಡಿಮಠ, ಬಸವೇಶ ಮಹಾಂತಶೆಟ್ಟರ, ಅಶ್ವಿನಿ ಅಂಕಲಕೋಟಿ, ಮಹಾಬಳೇಶ್ವರಪ್ಪ ಬೇವಿನಮರದ, ಪ್ರವೀಣ ಬಾಳಿಕಾಯಿ, ಸಿದ್ದನಗೌಡ ಬಳ್ಳೊಳ್ಳಿ, ಚನ್ನಪ್ಪ ಜಗಲಿ, ಡಾ. ಪಿ.ಡಿ. ತೋಟದ, ಈಶ್ವರ ಮೇಡ್ಲೇರಿ, ನಾಗರಾಜ ಕಳಸಾಪೂರ, ಸಿ.ಜಿ. ಹಿರೇಮಠ, ಸೋಮನಾಥ ಪೂಜಾರ, ಸಮೀರ ಪೂಜಾರ, ರಾಘವೇಂದ್ರ ಪೂಜಾರ, ಮಾಲಾದೇವಿ ದಂದರಗಿ, ಸುಮಾ ಚೋಟಗಲ್, ಪಾರ್ವತಿ ಕಳ್ಳಿಮಠ, ಪೂರ್ಣಾಜಿ ಖರಾಟೆ, ಸುರೇಶ ರಾಚನಾಯ್ಕರ್, ಬಸವರಾಜ ಮೆಣಸಿನಕಾಯಿ ಮುಂತಾದವರಿದ್ದರು.

ಪುಲಿಗೆರೆ ಉತ್ಸವ ಉದಯರಾಗ-1ರ ಪ್ರಥಮ ಕಾರ್ಯಕ್ರಮವನ್ನು ಲಕ್ಷ್ಮೇಶ್ವರದವರೇ ಆದ ಸಂಗೀತ ಶಿಕ್ಷಕಿ ವಿ.ಮುಕ್ತಾ ಕುಲಕರ್ಣಿಯವರ ಸಿತಾರ ವಾದನದ ಮೂಲಕ ಸೂರ್ಯೋದಯವನ್ನು ಸ್ವಾಗತಿಸಲಾಯಿತು. ಇವರಿಗೆ ಕೃಷ್ಣಕುಮಾರ ಕುಲಕರ್ಣಿ ತಬಲಾ ಸಾಥ್ ನೀಡಿದರು.

ಬಳಿಕ ಹುಬ್ಬಳ್ಳಿಯ ಯುವ ಕಲಾವಿದೆ ವಿ. ರಾಜೇಶ್ವರಿ ಪಾಟೀಲ ಅವರ ಹಿಂದೂಸ್ತಾನಿ ಸಂಗೀತ ಅಲೆ ಅಲೆಯಾಗಿ ತೇಲಿ ಬಂದಿತು. ಇವರಿಗೆ ಹರ್ಷಿತ ಸೋನಿ ತಬಲಾ ಹಾಗೂ ಚಿದಂಬರ ಜೋಶಿ ಹಾರ್ಮೋನಿಯಂ ಸಾಥ್ ನೀಡಿದರು.

**ಪುಲಿಗೆರೆ ಉತ್ಸವದಲ್ಲಿ ಇಂದು**

ಇನ್ಫೋಸಿಸ್ ಪುಲಿಗೆರೆ ಉತ್ಸವದಲ್ಲಿ ಫೆ.21ರಂದು 2ನೇ ದಿನದ ಉದಯರಾಗ-2ರಲ್ಲಿ ಬೆಳಿಗ್ಗೆ 6ಕ್ಕೆ ಲಕ್ಷ್ಮೇಶ್ವರದ ಯುವ ಕಲಾವಿದ ರಾಘವೇಂದ್ರ ಕೃಷ್ಣಾಜಿ ಕ್ಷತ್ರಿಯ ಇವರಿಂದ ಬಾನ್ಸುರಿ ವಾದನ, 7ಕ್ಕೆ ಬೆಂಗಳೂರಿನ ಪ್ರತಿಭಾವಂತ ಕಲಾವಿದೆ ವಿದುಷಿ ಚೈತ್ರಾ ಎಚ್.ಜಿ. ಅವರಿಂದ ಹಿಂದೂಸ್ತಾನಿ ಗಾಯನ ನಡೆಯಲಿದೆ. ಬೆಳಿಗ್ಗೆ 9ಕ್ಕೆ ಶ್ರೀ ಸೋಮೇಶ್ವರ ದೇವರ ಪಲ್ಲಕ್ಕಿ ಉತ್ಸವವು ಪಟ್ಟಣದ ಪ್ರಮುಖ ಮಾರ್ಗದಲ್ಲಿ ಜಾನಪದ ಕಲಾ ತಂಡಗಳೊಂದಿಗೆ ನೆರವೇರಲಿದೆ. ಪಲ್ಲಕ್ಕಿ ಉತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿಯವರು ವಿನಂತಿಸಿದ್ದಾರೆ.

ಸಂಜೆ 5.30ಕ್ಕೆ ಬೆಂಗಳೂರಿನ ರತ್ನಾಲಯದ ವಿ. ಅರುಣಾ ರಾಜಮಣಿ ಅವರ ತಂಡದಿಂದ ಭರತನಾಟ್ಯ, ಸಂಜೆ 6.30ಕ್ಕೆ ಬೆಂಗಳೂರಿನ ಕೂಚಿಪುಡಿ ನೃತ್ಯ ಅಕಾಡೆಮಿಯ ವಿ. ದಿವ್ಯಾ ರಾಮಚಂದ್ರ ಅವರ ತಂಡದಿಂದ ಕೂಚಿಪುಡಿ ನೃತ್ಯ ನಡೆಯಲಿದೆ. ಸಂಜೆ 7.30ಕ್ಕೆ ಕುಂದಗೋಳದ ಪಂ. ಅಶೋಕ ನಾಡಿಗೇರ ಅವರಿಂದ ಹಿಂದೂಸ್ತಾನಿ ಗಾಯನ ಕಾರ್ಯಕ್ರಮಗಳು ನೆರವೇರಲಿವೆ ಎಂದು ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೂತನ ಯಂತ್ರಗಳತ್ತ ರೈತರು ಆಸಕ್ತಿ ವಹಿಸಿ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರೈತರಿಗೆ ಒಕ್ಕಣಿ ಕಾರ್ಯಕ್ಕೆ ಅನುಕೂಲ ಆಗಲಿ ಎಂಬ ಉದ್ದೇಶದಿಂದ ಸಂಶೋಧನೆಗೊಂಡಿರುವ ಫಲ್ಸರ್ ಗ್ರೇಡರ್ ಯಂತ್ರದ ಕುರಿತ ಪ್ರಾತ್ಯಕ್ಷಿಕೆ ಕಾರ್ಯಕ್ರಮ ಗುರುವಾರ ಪಟ್ಟಣದ ಸಮೀಪದ ಮಂಜಲಾಪೂರ ವ್ಯಾಪ್ತಿಯಲ್ಲಿ ಕೃಷಿ ಇಲಾಖೆ ವತಿಯಿಂದ ಜರುಗಿತು.

ಉಪಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್ ಯಂತ್ರಕ್ಕೆ ಚಾಲನೆ ನೀಡಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಫಸಲು ಬಂದಾಗ ವಾತಾವರಣದ ಏರುಪೇರಿನಿಂದಾಗಿ ಧಾನ್ಯಗಳ ಒಕ್ಕಣಿಗೆ ಅಡ್ಡಿ ಆಗುತ್ತದೆ. ಅಲ್ಲದೆ ಕಾಳುಗಳನ್ನು ಮಣ್ಣಿನಿಂದ ಬೇರ್ಪಡಿಸುವ ಕಾರ್ಯದಲ್ಲಿಯೂ ಸಹ ರೈತರು ಅನೇಕ ತೊಂದರೆಗಳನ್ನು ಅನುಭವಿಸುತ್ತಾರೆ.

ಹೀಗೆ ವಾತಾವರಣದ ಅನಾನುಕೂಲತೆ ಇದ್ದಾಗ ಧಾನ್ಯಗಳನ್ನು ಒಕ್ಕಣಿ ಮಾಡಿ ಗ್ರೇಡಿಂಗ್ ಮಾಡುವುದು ಕಷ್ಟ. ಈ ಕೆಲಸ ಸುಲಭವಾಗಿ ನಡೆಯಲಿ ಎಂಬ ಉದ್ದೇಶದಿಂದ ಬಸವಾ ಇಂಡಸ್ಟ್ರೀಸ್‌ನವರು ಫಲ್ಸರ್ ಗ್ರೇಡರ್ ಯಂತ್ರವನ್ನು ಸಂಶೋಧನೆ ಮಾಡಿ ರೈತರಿಗೆ ರಿಯಾಯ್ತಿ ದರದಲ್ಲಿ ಪೂರೈಸುತ್ತಿದ್ದಾರೆ. ಈ ಯಂತ್ರ ದ್ವಿದಳ ಧಾನ್ಯಗಳನ್ನು ಗ್ರೇಡಿಂಗ್ ಮಾಡುವಲ್ಲಿ ಹೆಚ್ಚು ಅನುಕೂಲ ಆಗಲಿದೆ. ರೈತರು ಕೇವಲ 65 ಸಾವಿರ ರೂಪಾಯಿಗಳನ್ನು ಪಾವತಿಸಿ ಸಬ್ಸಿಡಿಯಲ್ಲಿ ಯಂತ್ರ ಖರೀದಿಸಬಹುದು.

ಈ ಯಂತ್ರದ ಸಹಾಯದಿಂದ ಒಂದು ಗಂಟೆಯಲ್ಲಿ 25 ಕ್ವಿಂಟಲ್ ಧಾನ್ಯಗಳನ್ನು ಒಕ್ಕಣಿ ಮಾಡಬಹುದು. ಕೇವಲ ಬೆಳೆ ಬೆಳೆಯುವುದಷ್ಟೇ ರೈತರ ಕೆಲಸವಲ್ಲ. ಬೆಳದ ಬೆಳೆಯನ್ನು ಮೌಲ್ಯವರ್ಧನೆ ಮಾಡಿ ಮಾರಾಟ ಮಾಡಿದರೆ ಹೆಚ್ಚು ಲಾಭ ಪಡೆಯಲು ಸಾಧ್ಯ. ಈ ನಿಟ್ಟಿನಲ್ಲಿ ಇಂತಹ ನೂತನ ಯಂತ್ರಗಳತ್ತ ರೈತರು ಆಸಕ್ತಿ ತೋರಬೇಕು ಎಂದು ಸಲಹೆ ನೀಡಿದರು.

ಬಸವಾ ಇಂಡಸ್ಟ್ರೀಸ್‌ನ ಸಚಿನ್ ಮಾತನಾಡಿ, ಸರ್ಕಾರದ ಸಹಾಯಧನದೊಂದಿಗೆ ರೈತರಿಗೆ ಫಲ್ಸರ್ ಗ್ರೇಡರ್ ಯಂತ್ರವನ್ನು ಕೊಡುತ್ತಿದ್ದೇವೆ.

ರೈತರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸಹಾಯಕ ಕೃಷಿ ನಿರ್ದೇಶಕ ಶಿವಪ್ಪ ಕಾಶಪ್ಪನವರ, ಸಹಾಯಕ ಕೃಷಿ ಅಧಿಕಾರಿಗಳಾದ ಚಂದ್ರಶೇಖರ ನರಸಮ್ಮನವರ, ಆಯ್.ಕೆ. ಹೊನ್ನಪ್ಪನವರ, ರೈತರಾದ ಚನ್ನಪ್ಪ ಹಳೆಮನಿ, ಮಲ್ಲಿಕಾರ್ಜುನ ಕಳಸಾಪುರ, ವಿ.ಎಂ. ಶಿಗ್ಲಿ, ಮುತ್ತಣ್ಣ ಗಡೆಪ್ಪನವರ, ಟಾಕಪ್ಪ ಸಾತಪೂತೆ, ಈರಣ್ಣ ಶೀರನಹಳ್ಳಿ ಮುಂತಾದವರಿದ್ದರು.

## ಭಾರತವನ್ನು ಅವಮಾನಿಸುತ್ತಿದೆ ಕಾಂಗ್ರೆಸ್

■ **ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ ಘನತೆ ಮತ್ತು ಜಾಗತಿಕ ಪ್ರತಿಷ್ಠೆಯನ್ನು ಕಾಪಾಡುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯವಾಗಿದೆ ಎಂದು ಬಿಜೆಪಿ ಯುವ ಮೋರ್ಚಾ ಗದಗ ಜಿಲ್ಲಾ ಅಧ್ಯಕ್ಷ ಶ್ರೀ ಸಂತೋಷ ಅಕ್ಕಿ ತಿಳಿಸಿದ್ದಾರೆ.

ಭಾರತವು ಇತ್ತೀಚೆಗೆ ಪ್ರತಿಷ್ಠಿತ ಅಂತಾರಾಷ್ಟ್ರೀಯ ಎಐ ಶೃಂಗಸಭೆಯನ್ನು ಆಯೋಜಿಸಿ, ಜಾಗತಿಕ ಮಟ್ಟದಲ್ಲಿ ತನ್ನ ನವೋದ್ಯಮ ಮತ್ತು ತಂತ್ರಜ್ಞಾನ ನಾಯಕತ್ವವನ್ನು ಸಾಬೀತುಪಡಿಸಿರುವ ಮಹತ್ವದ ಸಂದರ್ಭದಲ್ಲಿ, ಕಾಂಗ್ರೆಸ್ ಪಕ್ಷವು ರಾಷ್ಟ್ರದ ಗೌರವವನ್ನು ಕಾಪಾಡುವ ಬದಲು ಅದಕ್ಕೆ ಧಕ್ಕೆಯುಂಟು ಮಾಡುವ ತನ್ನ ಹಳೆಯ ಚಾಳಿಯನ್ನು ಮುಂದುವರೆಸಿದೆ ಎಂದು ಅವರು ಆರೋಪಿಸಿದರು.

ರಾಹುಲ್ ಗಾಂಧಿ ಅವರ ನೇತೃತ್ವದ ಕಾಂಗ್ರೆಸ್ ಕಾರ್ಯಕರ್ತರು ಅರೆಬೆತ್ತಲೆಯಾಗಿ ಸ್ಥಳದಲ್ಲಿ ಗದ್ದಲ ಸೃಷ್ಟಿಸಿರುವ ಘಟನೆ ಖಂಡನೀಯವಾಗಿದೆ. ಇದು ಜಾಗತಿಕ ವೇದಿಕೆಯಲ್ಲಿ ಭಾರತದ ಗೌರವಕ್ಕೆ ಧಕ್ಕೆ ತರುವ ಉದ್ದೇಶಪೂರ್ವಕ ಕೃತ್ಯವೆಂದು ಅವರು ತಿಳಿಸಿದ್ದಾರೆ.

ಭಾರತವು ಜಾಗತಿಕ ತಂತ್ರಜ್ಞಾನ ಶಕ್ತಿ ಕೇಂದ್ರವಾಗಿ ಹೊರಹೊಮ್ಮಲು



ಪ್ರಯತ್ನಿಸುತ್ತಿರುವ ಈ ಸಂದರ್ಭದಲ್ಲಿ ಇಂತಹ ನಡೆಗಳು ದೇಶದ ಹಿನ್ನಡೆಯನ್ನು ಬಯಸುವ ಪಟ್ಟಭದ್ರ ಹಿತಾಸಕ್ತಿಗಳಿಗೆ ಸಹಾಯ ಮಾಡುವಂತಿವೆ ಎಂದು ಸಂತೋಷ ಅಕ್ಕಿ ಹೇಳಿದರು. ರಾಜಕೀಯ ವಿರೋಧ ಪ್ರಜಾಪ್ರಭುತ್ವದ ಹಕ್ಕು, ಆದರೆ ಭಾರತದ ಜಾಗತಿಕ ಚಿತ್ರಣವನ್ನು ಹಾಳುಮಾಡುವ ಹಕ್ಕು ಯಾರಿಗೂ ಇಲ್ಲ ಎಂದು ಅವರು ಅಭಿಪ್ರಾಯಪಟ್ಟರು.

ಈ ಕೃತ್ಯವನ್ನು "ರಾಷ್ಟ್ರೀಯ ಅವಮಾನ" ಹಾಗೂ "ಬೇಜವಾಬ್ದಾರಿಯುತ ಅರಾಜಕತಾವಾದ" ಎಂದು ಖಂಡಿಸಿರುವ ಅವರು, ಕಾಂಗ್ರೆಸ್ ಪಕ್ಷವು ಭಾರತದ ಜಾಗತಿಕ ಇಮೇಜ್ ಹಾಳುಮಾಡಲು ಪ್ರಯತ್ನಿಸುತ್ತಿದೆ ಎಂದು ತೀವ್ರವಾಗಿ ಆರೋಪಿಸಿದರು.

## ನಾಳೆ ವೀರೇಶ್ವರ ಮಹಾ ಶಿವಶರಣರ ಮಹಾಮಠ ರಥೋತ್ಸವ

■ **ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನರಸಾಪೂರ ಗ್ರಾಮದ ನಾಲತ್ತವಾಡದಲ್ಲಿರುವ ಶ್ರೀ ವೀರೇಶ್ವರ ಮಹಾ ಶಿವಶರಣರ ಮಹಾಮಠದಲ್ಲಿ ಫೆಬ್ರವರಿ 21 ಮತ್ತು 22ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವ ನಡೆಯಲಿದೆ ಎಂದು ಶ್ರೀಮಠದ ಶಿವಕುಮಾರ ಶರಣರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೆಬ್ರವರಿ 21ರಂದು ಬೆಳಿಗ್ಗೆ 8 ಗಂಟೆಗೆ ಶ್ರೀ ವೀರೇಶ್ವರ ಮಹಾ ಶಿವಶರಣರು ಹಾಗೂ ಶ್ರೀ ಚಂದ್ರಶೇಖರ ಮಹಾ ಶಿವಶರಣರ ಮೂರ್ತಿಗಳಿಗೆ ಮಹಾರುದ್ರಾಭಿಷೇಕ ನಡೆಯಲಿದೆ. ಬೆಳಿಗ್ಗೆ 10 ಗಂಟೆಗೆ ಶ್ರೀ ಚಂದ್ರಶೇಖರ ಮಹಾ ಶಿವಶರಣರ ಪುಣ್ಯಸ್ಮರಣೋತ್ಸವ ಜರುಗಲಿದ್ದು, ಸಂಜೆ 5 ಗಂಟೆಗೆ ಬೆಟಗೇರಿಯ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ಶ್ರೀ ವೀರೇಶ್ವರ ಶರಣರ ಭಾವಚಿತ್ರದೊಂದಿಗೆ ಗುಗ್ಗಳ ಕಾರ್ಯಕ್ರಮ ನೆರವೇರಲಿದೆ.

ಫೆಬ್ರವರಿ 22ರಂದು ಅಡ್ನೂರು ದಾಸೋಹ ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಹಾಗೂ ಶಿವಕುಮಾರ ಶರಣರ ಸಮ್ಮುಖದಲ್ಲಿ ಷಟಸ್ಥಲ ಧ್ವಜಾರೋಹಣದ ಬಳಿಕ ಧರ್ಮಸಭೆ ನಡೆಯಲಿದೆ. ವೀರೇಶ್ವರ ಪುಣ್ಯಾಶ್ರಮದ ಡಾ. ಕುಬೇಂದ್ರಶಾಸ್ತ್ರಿ ಎಸ್. ಹಕ್ಕಂಡಿ ಅವರಿಂದ ಭಕ್ತಿಗೀತೆಯ ಸಂಗೀತ ಕಾರ್ಯಕ್ರಮ ಜರುಗಲಿದೆ.

ಮಧ್ಯಾಹ್ನ 2 ಗಂಟೆಗೆ ಮಹಾಪ್ರಸಾದ ವಿತರಣೆ ನಡೆಯಲಿದ್ದು, ಸಂಜೆ 5 ಗಂಟೆಗೆ ಶ್ರೀ ವೀರೇಶ್ವರ ಮಹಾ ಶಿವಶರಣರ ರಥೋತ್ಸವ ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನೆರವೇರಲಿದೆ. ಫೆಬ್ರವರಿ 23ರಂದು ಬೆಳಿಗ್ಗೆ 10 ಗಂಟೆಗೆ ಕಡುಬಿನ ಕಾಳಗ ಕಾರ್ಯಕ್ರಮ ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.



## ನೇತ್ರದಾನ ಜಾಗ್ರತಿ ಜಾಥಾ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಲಯನ್ಸ್ ಕ್ಲಬ್, ಗದಗ ಐಎಂಎ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ ನಗರದಲ್ಲಿ ನೇತ್ರದಾನದ ಬಗ್ಗೆ ಸಾರ್ವಜನಿಕರಲ್ಲಿ ಜಾಗ್ರತಿ ಮೂಡಿಸುವ ಜಾಥಾ ಜರುಗಿತು.

ಗದಗ ತೋಂಟದಾರ್ಯ ಮಠದಿಂದ ಆರಂಭಗೊಂಡ ಜಾಥಾ ಮಹೇಂದ್ರಕರ ಸರ್ಕಲ್, ಟಾಂಗಾ ಕೂಟ, ಹತ್ತಿಕಾಳ ಕೂಟ, ಹಳೇ ಬಸ್‌ನಿಲ್ದಾಣ, ಕೃಷ್ಣಾ ಟಾಕೀಜ್ ಮಾರ್ಗವಾಗಿ ಮರಳಿ ತೋಂಟದಾರ್ಯ ಮಠವನ್ನು ತಲುಪಿತು.

ಗದಗ-ಬೆಟಗೇರಿ ಅವಳಿ ನಗರ ಸೇರಿದಂತೆ ಗದಗ ಜಿಲ್ಲೆಯಲ್ಲಿ ಯಾರೇ ಮೃತಪಟ್ಟರೂ ಕುಟುಂಬಸ್ಥರು ತಕ್ಷಣ-9448611272, 9480193193, 9886328687, 9945865368 ಈ ನಂಬರ್‌ಗೆ ಫೋನ್ ಮಾಡಿದರೆ ನೇತ್ರದಾನ ಪ್ರಕ್ರಿಯೆ ಕೈಗೊಳ್ಳಲಾಗುವದು. ಕಾರಣ ವ್ಯಕ್ತಿಯ ಮರಣದ ನಂತರ ಕಣ್ಣು ಮಣ್ಣಿನಲ್ಲಿ ಮಣ್ಣಾಗದೆ, ಕಣ್ಣಿಲ್ಲದವರಿಗೆ ಅವರ ಕಣ್ಣು ಕಾಣುವಂತೆ ಮಾಡಲು ಕಣ್ಣುದಾನ ಮಾಡಲು ಕುಟುಂಬಸ್ಥರು ಸ್ವಯಂ ಪ್ರೇರಣೆಯಿಂದ ಮುಂದೆ ಬಂದು ಈ ಮಾನವೀಯ ಕಾರ್ಯಕ್ಕೆ ಕೈಜೋಡಿಸಬೇಕೆಂದು ಸಾರ್ವಜನಿಕರಲ್ಲಿ ಮನವಿ ಮಾಡಿಕೊಳ್ಳಲಾಯಿತು.

ರ‍್ಯಾಲಿಯಲ್ಲಿ ವಿವಿದ ಸಂಘಟನೆಗಳ ಪದಾಧಿಕಾರಿಗಳಾದ ರಾಜು ವೇರ್ಣೆಕರ, ರಾಜಣ್ಣ ಮಲ್ಲಾಡದ, ರೇಣುಕಪ್ರಸಾದ ಹಿರೇಮಠ, ಆನಂದ ಪೋತ್ನೀಸ್, ರಮೇಶ ಶಿಗ್ಲಿ, ನಿತೀಶ್ ಸಾಲಿ, ಡಾ. ಶ್ರೀಧರ ಕುರಡಗಿ, ಮಂಜುನಾಥ ವೀರಲಿಂಗಯ್ಯನಮಠ, ಎಸ್.ಕೆ. ಶೆಟ್ಟರ, ಅಮೀತ್‌ಚಂದ, ಪ್ರವೀಣ ವಾರಕರ, ಪ್ರಸಾದ ಶಿಗ್ಲಿಮಠ, ಪ್ರಕಾಶ ರಾಯ್ಕರ್, ಡಾ. ಲಾವಣ್ಯ, ಡಾ. ಸುನೀತಾ ಕುರಡಗಿ, ಸುರೇಖಾ ಮಲ್ಲಾಡದ, ಸಹನಾ ಹಿರೇಮಠ ಮುಂತಾದವರಿದ್ದರು.

### ಗದಗ ಅಕ್ಕನ ಬಳಗದಲ್ಲಿ ಎಲುಬು ಸಾಂದ್ರತೆ ತಪಾಸಣಾ ಶಿಬಿರ

# ಮಹಿಳೆಯರು ಪೌಷ್ಠಿಕ ಆಹಾರ ಸೇವಿಸಿ ಸದೃಢರಾಗಲಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ನಿಯಮಿತ ಪೌಷ್ಠಿಕ ಆಹಾರ ಸೇವನೆ, ವಾಯು ವಿಹಾರ, ಯೋಗ, ಧ್ಯಾನದ ಮೂಲಕ ಆರೋಗ್ಯವನ್ನು ಸದೃಢವಾಗಿ ಇಟ್ಟುಕೊಳ್ಳುವ ಮೂಲಕ ಎಲುಬಿನ ಸಾಂದ್ರತೆಯನ್ನು ಕಾಪಾಡಿಕೊಳ್ಳಬಹುದು ಎಂದು ಡಾ. ಪ್ರಕಾಶ ಸಂಕನೂರ ಹೇಳಿದರು.

ಅವರು ಗದಗ ಅಕ್ಕನ ಬಳಗದಲ್ಲಿ ಮಾಸಿಕ ಕಾರ್ಯಕ್ರಮ ಮಾಲಿಕೆಯಲ್ಲಿ ಏರ್ಪಡಿಸಿದ್ದ ಎಲುಬುಗಳ ಸಾಂದ್ರತೆ ತಪಾಸಣೆ ಶಿಬಿರದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಇಂದು ಸಾಮಾನ್ಯವಾಗಿ ಎಲ್ಲರೂ ಯಾಂತ್ರಿಕ ಜೀವನ ನಡೆಸುತ್ತಿದ್ದು, ಇದರ ಪರಿಣಾಮವಾಗಿ ಹಲವಾರು ಆರೋಗ್ಯ ಸಮಸ್ಯೆಗಳನ್ನು ಎದುರಿಸುವಂತಾಗಿದೆ. ದೈಹಿಕ ಶ್ರಮವಿಲ್ಲ, ಅಡ್ಡಾಟವಿಲ್ಲ, ಮನೆಗೆಲಸಕ್ಕೆ ಆಳು, ಉಳಿದ ಕೆಲಸಗಳೆಲ್ಲ ಯಂತ್ರೋಪಕರಣಗಳಿಂದಾಗಿ ಮನುಷ್ಯ ಆಲಸಿಯಾಗುತ್ತಿದ್ದಾನೆ. ವಿಶೇಷವಾಗಿ ಮಹಿಳೆಯರು ದೈಹಿಕ ಶ್ರಮವಿಲ್ಲದೆ ಮೊಣಕಾಲು, ಮಂಡಿ ನೋವು ಇತರೆ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದರು.

ಮಹಿಳೆಯರು ಪ್ರತಿ ತಿಂಗಳು ಋತುಚಕ್ರದ ಸಹಜ ಕ್ರಿಯೆ ಎದುರಿಸುವದರಿಂದ ರಕ್ತದ ಅಂಶ ಕಡಿಮೆಯಾಗುವದು. ಕಾರಣ



ಮಹಿಳೆಯರು ಉಪಹಾರ, ಊಟವನ್ನು ಸರಿಯಾದ ಸಮಯಕ್ಕೆ ಮಾಡುವದನ್ನು ರೂಢಿಸಿಕೊಳ್ಳಬೇಕು. ಮೊಟ್ಟೆ, ತೊಪ್ಪಲು ಪಲ್ಯೆ, ತರಕಾರಿ, ನೆನೆಸಿದ ಕಾಳು ಸೇವಿಸಬೇಕು. ನಿಯಮಿತ ಪೌಷ್ಠಿಕ ಆಹಾರ ಸೇವನೆ, ವಾಯು ವಿಹಾರ, ಯೋಗ, ಧ್ಯಾನ ಮಾಡಿದರೆ ಆರೋಗ್ಯದಲ್ಲಿ ಸಮತೋಲನ ಕಾಯ್ದುಕೊಳ್ಳಬಹುದು. ಜೊತೆಗೆ ಎಲುಬಿನ ಸವಕಳಿ ಪ್ರಮಾಣ ಕಡಿಮೆಯಾಗುವದು ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಅಕ್ಕನ ಬಳಗದ ಅಧ್ಯಕ್ಷೆ ಜಯಶ್ರೀ ಹುಬ್ಬಳ್ಳಿ ಸ್ವಾಗತಿಸಿ ಅಕ್ಕನ ಬಳಗದ ಸದಸ್ಯರು ಶಿಬಿರದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಶಿಬಿರದ ಪ್ರಯೋಜನ ಪಡೆಯಬೇಕೆಂದರು.

ಶಿಬಿರದಲ್ಲಿ ಎಲುಬಿನ ಸಾಂದ್ರತೆಯನ್ನು ಪರೀಕ್ಷಿಸುವ ತಜ್ಞರಾದ ರಘು ಮೇರವಾಡೆ, ನಾಗರಾಜ ನೀಲಗುಂದ ಹಾಗೂ ಶಬ್ಬೀರ ತಂಡದವರು ಅತ್ಯಾಧುನಿಕ ಯಂತ್ರೋಪಕರಣದಿಂದ ಎಲುಬಿನ ಸಾಂದ್ರತೆಯನ್ನು ಪರೀಕ್ಷಿಸಿ ಸಲಹೆ ನೀಡಿದರು. ಅಗತ್ಯವಿದ್ದವರಿಗೆ ಉಚಿತ ಔಷಧ ನೀಡಲಾಯಿತು.

ವೇದಿಕೆಯ ಟ್ರಸ್ಟಿ ಅಧ್ಯಕ್ಷೆ ಕಸ್ತೂರಿ ಹಿರೇಗೌಡ್ರ, ಶೈಲಜಾ ನಾಲ್ವಾಡ ಉಪಸ್ಥಿತರಿದ್ದರು. ಶಕುಂತಲಾ ಮುದಗಣ್ಣವರ ಪ್ರಾರ್ಥಿಸಿದರು. ಸುನೀತಾ ತಡಸದ ನಿರೂಪಿಸಿದರು. ಕಾರ್ಯದರ್ಶಿ ಜಯಶ್ರೀ ಪಾಟೀಲ ವಂದಿಸಿದರು. ಕಾರ್ಯಕ್ರಮದಲ್ಲಿ ಅಕ್ಕನ ಬಳಗದ ಸದಸ್ಯರು, ಟ್ರಸ್ಟಿಗಳು ಉಪಸ್ಥಿತರಿದ್ದರು.

ಡಾ. ಚಂದ್ರಯ್ಯ ಹೊಸಮಠ ಮಾತನಾಡಿ, 40 ವರ್ಷ ದಾಟಿದ ಮಹಿಳೆಯರಲ್ಲಿ ಮೊಣಕಾಲು ನೋವು ಸಮಸ್ಯೆಗಳು ಉದ್ಭವಿಸುವವು. ದೇಹದಲ್ಲಿ ಕ್ಯಾಲ್ಸಿಯಂ ಪ್ರಮಾಣ ಕಡಿಮೆಯಾದಾಗ ಆಯಾಸ ಆದಂತೆ ಕಾಣುವದು. ಆದ್ದರಿಂದ ಸರಿಯಾಗಿ ಊಟ ಮಾಡುವದು, ಊಟದಲ್ಲಿ ಪೌಷ್ಠಿಕ ಅಂಶವಿರುವ ಆಹಾರ ಸೇವಿಸುವದು, ವಾಕಿಂಗ್ ಮಾಡಬೇಕಲ್ಲದೆ ವೈದ್ಯರಲ್ಲಿ ತಪಾಸಣೆಗೆ ಒಳಗಾಗದೆ ವೈದ್ಯರ ಸಲಹೆ ಇಲ್ಲದೆ ಯಾವುದೇ ಔಷಧ ತೆಗೆದುಕೊಳ್ಳಬಾರದು ಎಂದರು.

# ಸರ್ವಜ್ಞ ಜಯಂತಿ ಸರಳವಾಗಿ ಆಚರಣೆ



**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದಲ್ಲಿ ಆದಿಕವಿ ತ್ರಿಪದಿ ಬ್ರಹ್ಮ ಮಹಾ ಸರ್ವಜ್ಞ ಜಯಂತಿಯನ್ನು ಸರಳ ಹಾಗೂ ಭಕ್ತಿಭಾವದಿಂದ ಆಚರಿಸಲಾಯಿತು.

ತಾಲೂಕು ಆಡಳಿತ ಸೌಧದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಸರ್ವಜ್ಞರ ಭಾವಚಿತ್ರಕ್ಕೆ ಹಣ್ಣುಗಳನ್ನು ಅರ್ಪಿಸಿ ಪೂಜೆ ಸಲ್ಲಿಸಲಾಯಿತು. ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಪ್ರಮುಖರು ಮಾತನಾಡಿ, ಸರ್ವಜ್ಞರ ಜೀವನ ಸಾಧನೆ ಹಾಗೂ ಅವರ ತ್ರಿಪದಿ ಸಾಹಿತ್ಯದ ಮಹತ್ವವನ್ನು ಸ್ಮರಿಸಿದರು. ಸರ್ವಜ್ಞರ ವಚನಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿದ್ದು, ನೈತಿಕತೆ, ಸತ್ಯ ಮತ್ತು ಧರ್ಮದ ಮಾರ್ಗದಲ್ಲಿ ನಡೆಯಲು ಪ್ರೇರಣೆಯಾಗಿವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಉಪ ದಂಡಾಧಿಕಾರಿಗಳಾದ ಶಿವಕುಮಾರ್ ಗೌಡ್ರು, ಮಡಕಟ್ಟಿ ನಾಗರಾಜ್ (ಎಫ್‌ಡಿಎ) ಸೇರಿದಂತೆ ತಾಲೂಕು ಕಚೇರಿ ಸಿಬ್ಬಂದಿಯವರು ಉಪಸ್ಥಿತರಿದ್ದರು. ಕುಂಬಾರರ ಸಮುದಾಯದ ಹಿರಿಯರು ಹಾಗೂ ಗಣ್ಯರು ಸರಳತೆಯಲ್ಲಿ ಸರ್ವಜ್ಞರ ಜಯಂತಿಯನ್ನು ಆಚರಿಸಿ, ಅವರ ಭಾವಚಿತ್ರಕ್ಕೆ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕುಂಬಾರ್ ಪಾಂಡುರಂಗಪ್ಪ, ಪ್ರಭುದೇವ್ ಕುಂಬಾರ್, ದೇವಣ್ಣ ಕುಂಬಾರ್, ಅಡವಿ ಬಸಪ್ಪ, ವರದಿಗಾರ ಬಸವರಾಜ್ ಕುಂಬಾರ್, ಹನುಮಂತಪ್ಪ ಬೆಣಕಲ್ಲು, ಹಾಲಪ್ಪ, ಶಿವಕುಮಾರ್, ಮಹೇಶ್, ಅಂಜಿನಪ್ಪ, ಸಿದ್ದಪ್ಪ, ರಮೇಶ್ ಕುಂಬಾರ್, ಹಾಲಪ್ಪ ಕುಂಬಾರ್, ರೇವಣಸಿದ್ದಪ್ಪ ಕುಂಬಾರ್, ಮಲ್ಲಪ್ಪ ಗುರುಭವನ ಕುಂಬಾರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಶ್ರೀ ಮುದುಕೇಶ್ವರ ಹಿರೇಮಠದ ಶ್ರೀ ಗುರು ಪಟ್ಟಾಧಿಕಾರ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಮಠಗಳು ಸಂಸ್ಕಾರ ಬೆಳೆಸುವ ಆಧ್ಯಾತ್ಮ ಕೇಂದ್ರಗಳಾಗಲಿ

**■ ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಭಾರತ ಧರ್ಮ ಭೂಮಿಯಲ್ಲಿ ಧರ್ಮ ಮತ್ತು ಆಧ್ಯಾತ್ಮಿಕ ಚಿಂತನೆಗಳಿಗೆ ಬಹಳಷ್ಟು ಮಹತ್ವದ ಸ್ಥಾನವಿದೆ. ಸಕಲ ಜೀವಾತ್ಮರಿಗೂ ಸದಾ ಒಳಿತನ್ನೇ ಬಯಸಿದ ವೀರಶೈವ ಧರ್ಮ ವಿಶಾಲ ಉತ್ಕೃಷ್ಟ ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳನ್ನು ಹೊಂದಿದೆ. ಈ ನಾಡಿನ ಮಠಗಳು ಸಂಸ್ಕಾರ ಕೊಡುವ, ಸಂಸ್ಕೃತಿ ಕಲಿಸುವ ಆಧ್ಯಾತ್ಮಿಕ ಕೇಂದ್ರಗಳಾಗಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಶ್ರೀಮತ್ಕಾಶೀ ಶಾಖಾ ವಿರುಪಾಪುರ ಕಲಕೇರಿ ಶ್ರೀ ಮುದುಕೇಶ್ವರ ಹಿರೇಮಠದ ಶ್ರೀ ಗುರು ಪಟ್ಟಾಧಿಕಾರ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವ ಜೀವನದ ಶ್ರೇಯಸ್ಸು ಧರ್ಮಾಚರಣೆಯಲ್ಲಿದೆ. ಧರ್ಮದ ದಿಕ್ಸೂಚಿ ಇಲ್ಲದೇ ಇದ್ದರೆ ಮಾನವ ಜೀವನ ವ್ಯರ್ಥ. ಸಂತಸ, ಶಾಂತಿಯ ಬದುಕಿಗೆ ಧರ್ಮ ಪರಿಪಾಲನೆಯ ಅವಶ್ಯಕತೆಯಿದೆ. ಭೌತಿಕ ಸಂಪತ್ತಿನ ಜೊತೆಗೆ ಒಂದಿಷ್ಟಾದರೂ ಶಿವಜ್ಞಾನದ ಅರಿವು ಮತ್ತು ಗುರು ಕಾರುಣ್ಯ ಇರಬೇಕಾಗುತ್ತದೆ. ವೀರಶೈವ ಧರ್ಮದಲ್ಲಿ ಶ್ರೀ ಗುರುವಿಗೆ ಮಹತ್ವದ ಸ್ಥಾನವನ್ನು ಕಲ್ಪಿಸಿದ್ದಾರೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ತತ್ವ-ಸಿದ್ಧಾಂತಗಳು ಜೀವನದ ವಿಕಾಸಕ್ಕೆ ಅಡಿಪಾಯವಾಗಿವೆ.



ವಿರೂಪಾಪುರ ಕಲಕೇರಿ ಹಿರೇಮಠದ ಮುದುಕೇಶ್ವರ ಶಿವಾಚಾರ್ಯರು ಅತ್ಯಂತ ಮುಗ್ಧರು, ಸರಳ ಜೀವಿಗಳು. ಭಕ್ತರ ಸಹಕಾರದಿಂದ ಶ್ರೀ ಮಠವನ್ನು ಅಭಿವೃದ್ಧಿಪಡಿಸಿದ್ದಾರೆ. ಪಟ್ಟಾಭಿಷಿಕ್ತರಾದ ನೂತನ ಅಭಿನವ ಮುದುಕೇಶ್ವರ ಶಿವಾಚಾರ್ಯರು ಹಿರಿಯರ ಆದರ್ಶ ದಾರಿಯಲ್ಲಿ ಮುನ್ನಡೆದು ಈ ಭಾಗದ ಭಕ್ತರಿಗೆ ಸನ್ಮಾರ್ಗ ದರ್ಶನ ನೀಡುವರೆಂಬ ಆತ್ಮವಿಶ್ವಾಸ ವ್ಯಕ್ತಪಡಿಸಿದ ಶ್ರೀ ರಂಭಾಪುರಿ ಜಗದ್ಗುರುಗಳು, ಉಭಯ ಶ್ರೀಗಳಿಗೆ ಸ್ಮರಣಿಕೆ ಮತ್ತು ಫಲ ಪುಷ್ಪವಿತ್ತು ಶುಭ ಹಾರೈಸಿದರು.

ಸಾನ್ನಿಧ್ಯ ವಹಿಸಿದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಆಶೀರ್ವಚನ ನೀಡಿ, ವಿಜ್ಞಾನ-ತಂತ್ರಜ್ಞಾನ ಬೆಳೆದಂತೆ ಮನುಷ್ಯನಲ್ಲಿ ಭಾವನೆಗಳು ಬೆಳೆಯುತ್ತಿಲ್ಲ. ಸುಖದ ಮೂಲ ಧರ್ಮ ಪರಿಪಾಲನೆಯಲ್ಲಿ ಇದೆ ಎಂಬುದನ್ನು ಯಾರೂ ಮರೆಯಬಾರದು. ಸಂಸ್ಕಾರ, ಸಂಸ್ಕೃತಿಗಳ ಪುನರುತ್ಥಾನ ಈ ನಾಡಿನ ಮಠಗಳಿಂದ ನಿರಂತರ ನಡೆಯುತ್ತಲೇ ಬಂದಿದೆ.

> ಪಟ್ಟಾಭಿಷಿಕ್ತರಾದ ನೂತನ ಅಭಿನವ ಮುದುಕೇಶ್ವರ ಶಿವಾಚಾರ್ಯರು ಮಾತನಾಡಿ, ಧರ್ಮ ಮಾನವ ಜೀವನದ ಉಸಿರಾಗಬೇಕು. ಅನ್ನ, ನೀರು, ಗಾಳಿ ಮನುಷ್ಯನಿಗೆ ಎಷ್ಟು ಅವಶ್ಯಕವೋ ಅಷ್ಟೇ ಧರ್ಮ ಪಾಲನೆಯ ಅವಶ್ಯಕತೆಯಿದೆ. ವೀರಶೈವ ಧರ್ಮದ ಆದರ್ಶ ಚಿಂತನ ಮತ್ತು ಗುರು ಪರಂಪರೆಯ ಪಾವಿತ್ರ್ಯತೆಯನ್ನು ಕಾಪಾಡಿಕೊಂಡು ಬರುತ್ತೇವೆ ಎಂದು ಸಂಕಲ್ಪ ತೊಟ್ಟರು.

ವಿದ್ಯಾ ವಿನಯ ಸಂಪನ್ನರಾದ ಅಭಿನವ ಮುದುಕೇಶ್ವರ ಶಿವಾಚಾರ್ಯರನ್ನು ಪಡೆದ ಇಲ್ಲಿಯ ಜನ ಭಾಗ್ಯವಂತರು. ವೀರಶೈವ ಧರ್ಮದ ಆದರ್ಶ ಚಿಂತನಗಳನ್ನು ಭಕ್ತ ಸಂಕುಲಕ್ಕೆ ಬೋಧಿಸಿ ಸನ್ಮಾರ್ಗಕ್ಕೆ ಕರೆ ತರುವ ಶಕ್ತಿಯನ್ನು ನೂತನ ಶ್ರೀಗಳಿಗೆ ಭಗವಂತ ಕೊಡಲೆಂದು ಆಶಿಸಿ ಆಶೀರ್ವದಿಸಿದರು.

ನೇತೃತ್ವ ವಹಿಸಿದ ಹಿರಿಯ ಪಟ್ಟಾಧ್ಯಕ್ಷರಾದ ಮುದುಕೇಶ್ವರ ಶಿವಾಚಾರ್ಯರು ಮಾತನಾಡಿ, ಶ್ರಮದ ಬೆವರಿನ ಫಲ ಶಾಶ್ವತ ಮತ್ತು ಸುಖದಾಯಕ. ಕಾಯಕದಿಂದಲೇ ಮನುಷ್ಯನಿಗೆ ಕಳಾ ಚೈತನ್ಯ ಪ್ರಾಪ್ತಿಯಾಗುತ್ತದೆ. ಶ್ರೀ ಮಠದ ಅಭಿವೃದ್ಧಿಗಾಗಿ ಸದಾ ಶ್ರಮಿಸಿರುವೆ. ಇದೇ ದಾರಿಯಲ್ಲಿ ನೂತನ ಶ್ರೀಗಳು ಕಾರ್ಯೋನ್ಮುಖರಾಗಿ ಮಾರ್ಗದರ್ಶನ ನೀಡುತ್ತಾರೆ ಎಂದರು.

ಮುಕ್ತಿಮಂದಿರ, ಹುಕ್ಕೇರಿ, ಬನ್ನಿಕೊಪ್ಪ, ಸುಳ್ಳ, ಶಿರಕೋಳ, ಕೊಣಂದೂರು, ಹಿರೇವಡ್ಡಟ್ಟಿ, ಅಂಗೂರು, ಹಂಪಸಾಗರ, ಹಿರೇಮಲ್ಲಕೇರಿ ಮಾನಿಹಳ್ಳಿ, ಮೈನಳ್ಳಿ ಮೊದಲ್ಗೊಂಡು 25ಕ್ಕೂ ಹೆಚ್ಚು ಮಠಾಧೀಶರು ಉಪಸ್ಥಿತರಿದ್ದರು. ಮಾಜಿ ಸಚಿವ ಎಸ್.ಎಸ್. ಪಾಟೀಲ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವೀರೇಶ ಕೂಗು, ಚಂದ್ರು ಬಾಳಿಹಳ್ಳಿಮಠ ಮೊದಲಾದ ಗಣ್ಯರು ಪಾಲ್ಗೊಂಡಿದ್ದರು. ಶಿವಕುಮಾರಗೌಡ ಪಾಟೀಲ ಸ್ವಾಗತಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

# ಶ್ರೀ ರೇಣುಕಾಚಾರ್ಯ ಜಯಂತಿ ಕುರಿತು ಪೂರ್ವಭಾವಿ ಸಭೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಮಾರ್ಚ್ 1ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ಶ್ರೀ ರೇಣುಕಾಚಾರ್ಯ ಜಯಂತಿ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶ್ರೀ ರೇಣುಕಾಚಾರ್ಯ ಜಯಂತಿಯನ್ನು ತಾಲೂಕು ಮಟ್ಟದಲ್ಲಿ ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಆಚರಿಸಲು ಕ್ರಮ ವಹಿಸಬೇಕು. ಶಾಲಾ-ಕಾಲೇಜು, ಗ್ರಾಮ ಪಂಚಾಯಿತಿಯಲ್ಲಿ ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಆಚರಿಸಲು ಕ್ರಮ ವಹಿಸಬೇಕು. ಎಸ್.ಎಸ್.ಎಲ್.ಸಿ, ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಸಾಧಕರನ್ನು, ಹಿರಿಯರನ್ನು ಸನ್ಮಾನಿಸುವ ಕಾರ್ಯಕ್ರಮ ಜರುಗಲಿದೆ ಎಂದರು.

ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಜಯಂತಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮಕ್ಕೆ ಶೋಭೆ ತರಬೇಕು. ಶ್ರೀ ರೇಣುಕಾಚಾರ್ಯ ಜಯಂತಿ ಕುರಿತು ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಒಟ್ಟಾರೆಯಾಗಿ ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಸುವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಸಮಾಜದ ಹಿರಿಯರು, ಗಣ್ಯರು, ಮುಖಂಡರು, ಮಹಿಳೆಯರು ಸೇರಿದಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಕುಮಾರ ಸೋಪಡ್ಲ, ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# ಇಂದು ಬೆಳಗಾವಿ ವಿಭಾಗ ಮಟ್ಟದ ತಾಂತ್ರಿಕ ಸಮ್ಮೇಳನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯತ್, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಕರ್ನಾಟಕ ಪ್ರಾಣಿ ಕಲ್ಯಾಣ ಮಂಡಳಿ, ಕರ್ನಾಟಕ ಪಶು ವೈದ್ಯಕೀಯ ಸಂಘ ಹಾಗೂ Humane World for Animals India Foundation ಇವರ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನ ಪಶು ಸಂಗೋಪನೆ ಹಾಗೂ ಪ್ರಾಣಿ ಕಲ್ಯಾಣ ಮಾಸಾಚರಣೆ ಅಂಗವಾಗಿ ಬೆಳಗಾವಿ ವಿಭಾಗ ಮಟ್ಟದ ತಾಂತ್ರಿಕ ಸಮ್ಮೇಳನವನ್ನು ಫೆಬ್ರವರಿ 21ರಂದು ಬೆಳಿಗ್ಗೆ 10 ಗಂಟೆಗೆ ನಾಗಾವಿಯ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಗ್ರಾಮ ಗಂಗೋತ್ರಿ ಆವರಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್.ಪಾಟೀಲ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಉಪಸ್ಥಿತರಿರುವರು. ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಆಯುಕ್ತೆ ಶಿಲ್ಪಾ ನಾಗ್, ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕುಮಾರ್ ಕೆಂಚಪ್ಪನವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

ತಾಂತ್ರಿಕ ಸಮ್ಮೇಳನದಲ್ಲಿ ವಿಶೇಷ ತಜ್ಞ ಉಪನ್ಯಾಸಕರಾಗಿ ಬೆಳಗಾವಿಯ ಚೀಫ್ ಕನ್ಸರ್ವೇಟರ್ ಆಫ್ ಫಾರೆಸ್ಟ್ ಮಂಜುನಾಥ ಆರ್ ಚವ್ಹಾಣ, ಭಾರತ ಸರಕಾರದ ಮಾಜಿ ಪಶು ಸಂಗೋಪನಾ ಆಯುಕ್ತರು ಹಾಗೂ ಬೀದರ ಕೆವಿಎಫ್‌ಎಸ್‌ಯು ಉಪಕುಲಪತಿ ಡಾ.ಸುರೇಶ ಎಸ್ ಹೊನ್ನಪ್ಪಗೋಳ, ಪಶು ವೈದ್ಯಕೀಯ ಸೂಕ್ಷ್ಮಜೀವ ವಿಜ್ಞಾನ ವಿಭಾಗದ ಪ್ರಾಧ್ಯಾಪಕರು ಹಾಗೂ ಬೆಂಗಳೂರು ಪ್ರಯೋಗಾಲಯದ ಮುಖ್ಯಸ್ಥ ಶ್ರೀ ಕೃಷ್ಣ ಇಸ್ಲೂರ ಹಾಗೂ ಹ್ಯೂಮೇನ್ ವರ್ಲ್ಡ್ ಫಾರ್ ಅನಿಮಲ್ಸ್ ಫೌಂಡೇಶನ್‌ನ ರಮೇಶ ಭಜಂತ್ರಿ ಉಪನ್ಯಾಸ ನೀಡಲಿದ್ದಾರೆ. ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಜಂಟಿ ನಿರ್ದೇಶಕ (ರಾಜ್ಯ ವಲಯ) ಡಾ.ಎಚ್.ನಾಗರಾಜ, ಉಪನಿರ್ದೇಶಕ (ಆಡಳಿತ) ಡಾ.ಎಚ್.ಬಿ.ಹುಲಗಣ್ಣವರ ಹಾಗೂ ಕರ್ನಾಟಕ ಪಶು ವೈದ್ಯಕೀಯ ಸಂಘದ ಅಧ್ಯಕ್ಷ ಡಾ.ಆರ್.ವೈ. ಗುರಿಕಾರ ಸ್ವಾಗತ ಕೋರಿದ್ದಾರೆ.

# ರತ್ನಾ ಸಿ.ಯಳಮಲಿ ನಿಧನ; ನೇತ್ರದಾನ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ರಾಜೀವ ಗಾಂಧಿ ನಗರದ ಈಶ್ವರ ಬಡಾವಣೆಯ (4ನೇ ಅಡ್ಡರಸ್ತೆ) ನಿವಾಸಿ ಶ್ರೀಮತಿ ರತ್ನಾ ಸಿದ್ಧರಾಮಪ್ಪ ಯಳಮಲಿ (82) ಅವರು ಫೆ. 20ರಂದು ಸಂಜೆ 4 ಗಂಟೆಗೆ ನಿಧನರಾದರು. ಮೃತರಿಗೆ ಮೂವರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳಿದ್ದಾರೆ. ಗದಗ ಜಿಲ್ಲಾ ಗೃಹರಕ್ಷಕ ದಳದ ಮಾಜಿ ಸಮಾದೇಷ್ಟರಾದ ವಿಶ್ವನಾಥ ಯಳಮಲಿ ಮೃತರ ಪುತ್ರರಲ್ಲಿ ಓರ್ವರಾಗಿದ್ದಾರೆ.

ದೇಹದಾನ ಹಾಗೂ ನೇತ್ರದಾನದ ಪತ್ರಕ್ಕೆ ಸ್ವಯಂಸ್ಫೂರ್ತಿಯಿಂದ ಒಪ್ಪಿಗೆಯ ಸಹಿ ಮಾಡಿದ್ದ ಶ್ರೀಮತಿ ರತ್ನಾ ಅವರ ಇಚ್ಛೆಯಂತೆ ನೇತ್ರದಾನ ಮಾತ್ರ ಮಾಡಲು ಅವಕಾಶವಾಯಿತು. ಫೆ. 21ರಂದು ಶನಿವಾರ ಮುಂಜಾನೆ 11 ಗಂಟೆಗೆ ಈಶ್ವರ ಬಡಾವಣೆಯ ಮೃತರ ನಿವಾಸದಿಂದ ಅಂತ್ಯಯಾತ್ರೆ ಹೊರಡಲಿದೆ.


ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪ್ರೇರಣೆಯಿಂದಾಗಿ ಕುಟುಂಬಸ್ಥರು ಮೃತರ ನೇತ್ರದಾನ ಮಾಡಲು ಒಪ್ಪಿಗೆ ಸೂಚಿಸಿದ್ದು, ಗದಗ ಜಿಮ್ಸ್‌ನ ನೇತ್ರ ತಜ್ಞರ ತಂಡ ನೇತ್ರದಾನ ಪ್ರಕ್ರಿಯೆ ಕೈಗೊಂಡರು. ಈ ಸಂದರ್ಭದಲ್ಲಿ ವಿಶ್ವನಾಥ ಯಳಮಲಿ, ಲಯನ್ಸ್ ಕ್ಲಬ್ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ರಮೇಶ ಶಿಗ್ಲಿ ಹಾಗೂ ಕುಟುಂಬದ ಸದಸ್ಯರಿದ್ದರು.

ಮೃತ ವ್ಯಕ್ತಿಯ ನೇತ್ರದಾನ ಮಾಡಿ ಮಾನವೀಯತೆ ಮೆರೆಯುವ ಮೂಲಕ ಅಂಧರು ಕಣ್ತೆರೆಯುವಂತೆ ನೇತ್ರದಾನವನ್ನು ಹಾಗೂ ವೈದ್ಯಕೀಯ ವಿದ್ಯಾರ್ಥಿಗಳು ಅಂಗರಚನಾ ಶಾಸ್ತ್ರದ ಅಧ್ಯಯನಕ್ಕಾಗಿ ದೇಹದಾನ ಮಾಡುವ ಮೂಲಕ ಸಾವಿನಲ್ಲೂ ಸಾರ್ಥಕತೆ ಕಂಡುಕೊಳ್ಳುವ ಕಾರ್ಯಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕೆಂದು ಕ್ಲಬ್ ಪದಾಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ.

# ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರ ಜಿಲ್ಲಾ ಪ್ರವಾಸ

**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್ ಕೆ ಪಾಟೀಲ್ ಅವರು ಫೆಬ್ರವರಿ 21 ಮತ್ತು 22ರಂದು ಗದಗ ಜಿಲ್ಲೆಯಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಪ್ರವಾಸ ಕೈಗೊಳ್ಳಲಿದ್ದಾರೆ.



ಫೆಬ್ರವರಿ 21ರ ಬೆಳಿಗ್ಗೆ 8 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 9 ಗಂಟೆಗೆ ಗದಗಿಗೆ ಆಗಮಿಸಲಿದ್ದಾರೆ. ಬೆಳಿಗ್ಗೆ 10 ಗಂಟೆಗೆ ನಾಗಾವಿಯ ಎವ್ಹ್ ಜಿ ಆರ್ ಡಿ ಪಿ ಆರ್ ವಿಶ್ವವಿದ್ಯಾಲಯದ ಜ್ಞಾನ ಗಂಗೋತ್ರಿಯಲ್ಲಿ ಪಶು ಸಂಗೋಪನೆ ಹಾಗೂ ಪ್ರಾಣಿ ಕಲ್ಯಾಣ ಮಾಸಾಚರಣೆ ಅಂಗವಾಗಿ ಬೆಳಗಾವಿ ವಿಭಾಗ ಮಟ್ಟದ ತಾಂತ್ರಿಕ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 10.30 ಗಂಟೆಗೆ ಗದಗದ ತೋಂಟದಾರ್ಯದಲ್ಲಿ ಪೂಜ್ಯ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 77ನೇ ಜಯಂತಿ ಪ್ರಯುಕ್ತ ಭಾವೈಕ್ಯತಾ ದಿನಾಚರಣೆ, ಗ್ರಂಥ ಬಿಡುಗಡೆ, ವಚನ ಪಾಠಶಾಲೆ ಉದ್ಘಾಟನೆ ಹಾಗೂ ಸನ್ಮಾನ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ನಂತರ ಬೆಳಿಗ್ಗೆ 11.30ಕ್ಕೆ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಸಭಾಭವನದಲ್ಲಿ ನಡೆಯುವ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 2 ಗಂಟೆಗೆ ಗದಗಿನಿಂದ ಬೆಳಗಾವಿಗೆ ಪ್ರಯಾಣಿಸಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಹುಬ್ಬಳ್ಳಿಯಲ್ಲಿ ವಾಸ್ತವ್ಯ ಮಾಡಲಿದ್ದಾರೆ.

ಫೆಬ್ರವರಿ 22ರಂದು ಬೆಳಿಗ್ಗೆ 9.30ಕ್ಕೆ ಹುಬ್ಬಳ್ಳಿಯಿಂದ ಹೊರಟು 10.30ಕ್ಕೆ ಗದಗಿಗೆ ಆಗಮಿಸಲಿದ್ದಾರೆ. ಇದೇ ಸಮಯದಲ್ಲಿ ಗದಗದ ಕೆ ಎಚ್ ಪಾಟೀಲ್ ಇನ್ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ನಲ್ಲಿ ನಡೆಯುವ ಅನಸ್ತೇಶಿಯಾ ಅಪ್‌ಡೇಟ್ ಜಿಎಸಿಸಿ-2026 ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಬೆಳಿಗ್ಗೆ 11.30ಕ್ಕೆ ಗಜೇಂದ್ರಗಡ ತಾಲೂಕಿನ ಕೋಡಿಕೊಪ್ಪ ಗ್ರಾಮದಲ್ಲಿರುವ ಶ್ರೀ ವೀರಪ್ಪಜ್ಜನವರ ಕಲ್ಯಾಣ ಮಂಟಪದಲ್ಲಿ ಡಾ. ಜಿ.ಕೆ. ಕಾಳೆ ಅವರ ಅಮೃತ ಮಹೋತ್ಸವ ಅಭಿನಂದನ ಗ್ರಂಥ ಲೋಕಾರ್ಪಣೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಯಾದಗಿರಿ ಜಿಲ್ಲೆಯ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಜನರ ಬದುಕು ಬದಲಿಸಿದ ಗ್ಯಾರಂಟಿ ಯೋಜನೆಗಳು

▶▶ ಮೊದಲನೇ ಪುಟದಿಂದ

ಅವರ ಈ ಸರಳ ಹಾಗೂ ಸ್ನೇಹಪೂರ್ಣ ನಡೆ ಜನಮನ ಗೆದ್ದಿತು. ಕಲೆಯ ಮೂಲಕ ಯೋಜನೆಗಳ ಸಂದೇಶವನ್ನು ಜನರಿಗೆ ತಲುಪಿಸುವ ಪ್ರಯತ್ನ ಗಮನ ಸೆಳೆಯಿತು. ಈ ಸಂದರ್ಭದಲ್ಲಿ ಸಚಿವರು ತಮ್ಮ ಸಂತೋಷವನ್ನು ವ್ಯಕ್ತಪಡಿಸಿ, ಕಲಾವಿದರ ಪ್ರತಿಭೆಯನ್ನು ಮೆಚ್ಚಿದರು. ಈ ಮೂಲಕ ಸಾರ್ವಜನಿಕರಲ್ಲಿ ಉತ್ಸಾಹ ಮೂಡಿಸಿ, ಸರ್ಕಾರದ ಯೋಜನೆಗಳ ಬಗ್ಗೆ ಹೆಚ್ಚಿನ ಅರಿವು ಹಾಗೂ ಭಾಗವಹಿಸುವ ಮನೋಭಾವವನ್ನು ಹೆಚ್ಚಿಸಿದರು.

ಧಾರವಾಡ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಶಾನಪ್ಪಗೌಡ ಪಾಟೀಲ ಮಾತನಾಡಿದರು. ವಾರ್ತಾ ಇಲಾಖೆಯ ಪ್ರಭಾರ ಸಹಾಯಕ ನಿರ್ದೇಶಕ ಡಾ. ಸುರೇಶ ಹಿರೇಮಠ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ವಾರ್ತಾ ಇಲಾಖೆಯ ಮನೋಜ ಮಸನಿ ವಂದಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಕಲಘಟಗಿ ತಹಸೀಲ್ದಾರ ಬಸವರಾಜ ಹೊಂಕಣನವರ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಪಿ.ವಾಯ್. ಸಾವಂತ, ಕಲಘಟಗಿ ಪ.ಪಂ ಮುಖ್ಯಾಧಿಕಾರಿ ಚಂದ್ರಶೇಖರ ಬಿ, ಸಿಪಿಐ ಶ್ರೀಶೈಲ ಕೌಜಲಗಿ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕಾ ಮಟ್ಟದ ಅಧಿಕಾರಿಗಳು, ಜನಪ್ರತಿನಿಧಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka